ಬುಧವಾರ 04.02.2026
ಬೆಂಗಳೂರು, ಬೆಲೆ: 5ರೂ,2 ಪುಟಗಳು
ಸಂಪುಟ 01 – ಸಂಚಿಕೆ 135

Digital Varthe Kannada Daily
Volume 01 - Issue 135
Wednesday , 04.02.2026
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## ತಾಯಿ ಜೊತೆ ಓಡಿ ಹೋದವನ ಬರ್ಬರವಾಗಿ ಕೊಂದ ವ್ಯಕ್ತಿ



**ಬೆಳಗಾವಿ:**ಅನೈತಿಕ ಸಂಬಂಧದ ಹಿನ್ನೆಲೆಯಲಿನ ದ್ವೇಷವೇ ಭೀಕರ ಹತ್ಯೆಯಾಗಿ ಮಾರ್ಪಟ್ಟಿರುವ ಘಟನೆ ಬೆಳಗಾವಿ ಜಿಲ್ಲೆಯ ಸವದತ್ತಿ ತಾಲೂಕಿನ ಹೂಲಿಕಟ್ಟಿ ಗ್ರಾಮದಲ್ಲಿ ನಡೆದಿದ್ದು, ಈ ಕ್ರೂರ ಘಟನೆಯಿಂದ ಗ್ರಾಮಸ್ಥರಲ್ಲಿ ಭಾರೀ ಆತಂಕ ಮತ್ತು ಬೆಚ್ಚಿಬೀಳುವ ವಾತಾವರಣ ನಿರ್ಮಾಣ ವಾಗಿದೆ.

ಸಡೋಣಿ ಗ್ರಾಮದ ನಿವಾಸಿ ಬಸಪ್ಪ ಹೊಸಮನಿ (51) ಎಂಬವರನ್ನು ಮಚ್ಚಿನಿಂದ ಸಿಕ್ಕ ಸಿಕ್ಕ ಕಡೆ ನಿರ್ದಯವಾಗಿ ಕೊಚ್ಚಿ ಬರ್ಬರವಾಗಿ ಹತ್ಯೆ ಮಾಡಲಾಗಿದೆ. ಈ ಪ್ರಕರಣದಲ್ಲಿ ಈರಯ್ಯ ಮಠಪತಿ ಎಂಬಾತ ಆರೋಪಿಯಾಗಿದ್ದು, ಕೊಲೆಯ ಭೀಕರ ದೃಶ್ಯಗಳನ್ನು ಕಂಡ ಗ್ರಾಮವೊಂದೇ ತಲ್ಲಣಗೊಂಡಿದೆ.

ಪೊಲೀಸರು ನೀಡಿದ ಮಾಹಿತಿಯಂತೆ, ಸುಮಾರು 10 ವರ್ಷಗಳ ಹಿಂದೆ ಆರೋಪಿ ಈರಯ್ಯ ತನ್ನ ತಾಯಿಯೊಂದಿಗೆ ಬಸಪ್ಪ ಹೊಸಮನಿಯೊಂದಿಗೆ ಮಹಾರಾಷ್ಟ್ರದ ಕೊಲ್ಹಾಪುರಕ್ಕೆ ಓಡಿ ಹೋಗಿದ್ದ. ಆ ವೇಳೆ ಈರಯ್ಯನಿಗೆ ಕೇವಲ 18 ವರ್ಷ ವಯಸ್ಸಾಗಿತ್ತು. ಹಲವು ವರ್ಷಗಳ ಕಾಲ ಕೊಲ್ಹಾಪುರದಲ್ಲೇ ವಾಸವಾಗಿದ್ದ ಬಸಪ್ಪ, ಇತ್ತೀಚೆಗೆ ತನ್ನ ತಾಯಿಯನ್ನು ಅಲ್ಲಿಯೇ ಬಿಟ್ಟು ನಾಲ್ಕು ದಿನಗಳ ಹಿಂದಷ್ಟೇ ಹೂಲಿಕಟ್ಟಿ ಗ್ರಾಮಕ್ಕೆ ಮರಳಿದ್ದನು. ಈ ವಿಚಾರವನ್ನು ಮನಸ್ಸಿನಲ್ಲಿ ಇಟ್ಟುಕೊಂಡು ದ್ವೇಷ ಸಾಧಿಸುತ್ತಿದ್ದ ಈರಯ್ಯ, ಬಸಪ್ಪನ ಮೇಲೆ ಪ್ರತೀಕಾರ ತೀರಿಸಿಕೊಳ್ಳಲು ಯೋಜನೆ ರೂಪಿಸಿದ್ದಾನೆ ಎನ್ನಲಾಗಿದೆ.

ನಿನ್ನೆ ಸಂಜೆ ಬಸಪ್ಪನನ್ನು ಅಡ್ಡಗಟ್ಟಿ ಮಚ್ಚಿನಿಂದ ಅಕ್ರಮಣ ನಡೆಸಿದ ಆರೋಪಿ, ಒಟ್ಟು 16 ಬಾರಿ ಕೊಚ್ಚಿ ಸ್ಥಳದಲ್ಲೇ ಕೊಂದಿದ್ದಾನೆ. ಹತ್ಯೆಯ ನಂತರವೂ ಆತನ ಕ್ರೌರ್ಯ ಅಷ್ಟರಲ್ಲೇ ನಿಲ್ಲದೆ, ಸಿನಿಮಾ ಶೈಲಿಯಲ್ಲಿ ಶವದ ಮೇಲೆ ಕಾಲಿಟ್ಟು ನಿಂತು ಪೊಲೀಸರಿಗೆ ತಾನೇ ಕರೆ ಮಾಡಿ ಘಟನೆ ಬಗ್ಗೆ ಮಾಹಿತಿ ನೀಡಿದ್ದಾನೆ. ಪೊಲೀಸರು ಸ್ಥಳಕ್ಕೆ ಬರುವವರೆಗೂ ಶವದ ಮೇಲೆ ಕಾಲಿಟ್ಟು ನಿಂತಿದ್ದಾನೆ ಎಂಬುದು ತಿಳಿದು ಬಂದಿದ್ದು, ಈ ವರ್ತನೆ ಗ್ರಾಮಸ್ಥರನ್ನು ಇನ್ನಷ್ಟು ಬೆಚ್ಚಿಬೀಳುವಂತೆ ಮಾಡಿದೆ.

ಈ ಪ್ರಕರಣ ಸವದತ್ತಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದು, ತಕ್ಷಣ ಸ್ಥಳಕ್ಕೆ ಧಾವಿಸಿದ ಪೊಲೀಸರು ಆರೋಪಿ ಈರಯ್ಯನನ್ನು ಬಂಧಿಸಿ ವಿಚಾರಣೆ ನಡೆಸುತ್ತಿದ್ದಾರೆ. ಹತ್ಯೆಗೆ ಕಾರಣವಾದ ಹಿನ್ನಲೆ, ಘಟನೆಯ ಸಂಪೂರ್ಣ ವಿವರಗಳು ಮತ್ತು ಇನ್ನಿತರ ಅಂಶಗಳ ಕು–ರಿತು ಪೊಲೀಸರು ಸವಿಸ್ತಾರ ತನಿಖೆ ಮುಂದುವರಿಸಿದ್ದಾರೆ.

## ಚುನಾವಣೆಗೆ ಸ್ಪರ್ಧಿಸಲು ಮಗಳನ್ನೇ ಕೊಂದ ಪಾಪಿ ತಂದೆ!





**ಮುಂಬೈ:**ಎರಡಕ್ಕಿಂತ ಹೆಚ್ಚು ಮಕ್ಕಳಿದ್ದರೆ ಪಂಚಾಯತ್ ಚುನಾವಣೆಗೆ ಸ್ಪರ್ಧಿಸಲು ಅವಕಾಶ ಇಲ್ಲ ಎಂಬ ಮಹಾರಾಷ್ಟ್ರದ ನಿಯಮವೇ ಮನುಷ್ಯನೊಬ್ಬನಿಂದ ಅಮಾನುಷ ಕೃತ್ಯಕ್ಕೆ ಕಾರಣವಾದ ಘಟನೆ ಬೆಳಕಿಗೆ ಬಂದಿದೆ. ಗ್ರಾಮ ಪಂಚಾಯಿತಿ ಚುನಾವಣೆಗೆ ಸ್ಪರ್ಧಿಸುವ ಉದ್ದೇಶದಿಂದ, ತನ್ನದೇ ಆರು ವರ್ಷದ ಮಗಳನ್ನು ತೆಲಂಗಾಣದ ನಿಜಾಮಾಬಾದ್ ಜಿಲ್ಲೆಯ ಬೋಧನ್ ಕಾಲುವೆಗೆ ನೂಕಿ ಹತ್ಯೆ ಮಾಡಿದ ಘಟನೆ ಸಾರ್ವಜನಿಕ ವಲಯದಲ್ಲಿ ತೀವ್ರ ಆಘಾತ ಮೂಡಿಸಿದೆ.

ಕೊಲೆಯಾದ ಬಾಲಕಿಯನ್ನು ಪ್ರಾಚಿ (6) ಎಂದು ಗುರುತಿಸಲಾಗಿದ್ದು, ಈ ಕೃತ್ಯವೆಸಗಿದ ಆರೋಪಿಯನ್ನು ಪಾಂಡುರಂಗ ಕೊಂಡ್ಮಂಗಳೆ (28) ಎಂದು ಗುರುತಿಸಲಾಗಿದೆ. ಪಾಂಡುರಂಗ ಮೂಲತಃ ನಾಂದೇಡ್ ಜಿಲ್ಲೆಯ ಮುಖೇಡ್ ತಾಲೂಕಿನ ಕೆರೂರ್ ಗ್ರಾಮದ ನಿವಾಸಿಯಾಗಿದ್ದು, ಗ್ರಾಮದಲ್ಲಿ ಸೆಲೂನ್ ನಡೆಸುತ್ತಿದ್ದ. ಅವನು ಮುಂಬರುವ ಗ್ರಾಮ ಪಂಚಾಯಿತಿ ಚುನಾವಣೆಗೆ ಸ್ಪರ್ಧಿಸಲು ಸಜ್ಜಾಗುತ್ತಿದ್ದ ಎನ್ನಲಾಗಿದೆ.

ಪಾಂಡುರಂಗನಿಗೆ ಮೂರು ವರ್ಷದ ಗಂಡು ಮಗು ಹಾಗೂ ಆರು ವರ್ಷದ ಅವಳಿ ಹೆಣ್ಣು ಮಕ್ಕಳಿದ್ದರು. ಮಹಾರಾಷ್ಟ್ರದಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಸ್ಪರ್ಧಿಸುವ ಅಭ್ಯರ್ಥಿಗಳಿಗೆ 'ಎರಡು ಮಕ್ಕಳ ನಿಯಮ' ಜಾರಿಯಲ್ಲಿರುವುದರಿಂದ, ಅವನು ಚುನಾವಣೆಗೆ ಅನರ್ಹನಾಗಿದ್ದ. ಇದೇ ವಿಷಯ ಅವನನ್ನು ಮಾನಸಿಕವಾಗಿ ಕಾಡಿದ್ದು, ಚುನಾವಣೆಗೆ ಸ್ಪರ್ಧಿಸುವ ಉದ್ದೇಶಕ್ಕಾಗಿ ಭೀಕರ ನಿರ್ಧಾರ ಕೈಗೊಂಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಈ ವಿಚಾರವನ್ನು ಅವನು ತನ್ನ ಸ್ನೇಹಿತ ಹಾಗೂ ಗ್ರಾಮದ ಪ್ರಸ್ತುತ ಸರಪಂಚ್ ಗಣೇಶ್ ರಾಮಚಂದ್ರ ಶಿಂಧೆ ಜೊತೆ ಚರ್ಚಿಸಿದ್ದ. ಅವಳಿ ಮಕ್ಕಳಲ್ಲಿ ಹಿರಿಯಳಾದ ಪ್ರಾಚಿಯನ್ನು ಎಲ್ಲಾದರೂ ಬಿಟ್ಟುಬಂದರೆ ಸಮಸ್ಯೆ ನಿವಾರಣೆಯಾಗಬಹುದು ಎಂಬ ಯೋಚನೆ ಮಾಡಿದ್ದಾನೆ. ಆದರೆ, ಮಗು ಮತ್ತೆ ಮನೆಗೆ ವಾಪಸ್ ಬಂದರೆ ತೊಂದರೆಯಾಗುತ್ತದೆ ಎಂಬ ಕ್ರೂರ ಆಲೋಚನೆಯಿಂದ, ಆಕೆಯನ್ನು ಕಾಲುವೆಗೆ ತಳ್ಳಿ ಆಕಸ್ಮಿಕ ಸಾವು ಎಂದು ಬಿಂಬಿಸಲು ಯತ್ನಿಸಿದ್ದಾನೆ ಎನ್ನಲಾಗಿದೆ.

ಕೆಲವು ದಿನಗಳ ಹಿಂದೆ ಯೆಡಪಲ್ಲಿಯ ನಿಜಾಮ ಸಾಗರ್ ಕಾಲುವೆಯಲ್ಲಿ ಬಾಲಕಿಯ ಶವ ಪತ್ತೆಯಾಗಿತ್ತು. ಸಮೀಪದ ಹೊಲದಲ್ಲಿ ಕೆಲಸ ಮಾಡುತ್ತಿದ್ದ ರೈತರಿಗೆ ನೀರಿಗೆ ಏನೋ ಬಿದ್ದ ಶಬ್ದ ಕೇಳಿ, ಸ್ಥಳಕ್ಕೆ ಧಾವಿಸಿದಾಗ ಬಾಲಕಿಯ ಮೃತದೇಹ ಕಂಡುಬಂದಿತ್ತು. ಈ ಘಟನೆಯ ನಂತರ ಬಾಲಕಿಯ ಫೋಟೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಪ್ರಕರಣಕ್ಕೆ ಹೊಸ ತಿರುವು ನೀಡಿತ್ತು.

ಈ ಬಗ್ಗೆ ಪ್ರತಿಕ್ರಿಯಿಸಿರುವ ನಿಜಾಮಾಬಾದ್ ಪೊಲೀಸ್ ಆಯುಕ್ತ ಪಿ. ಸಾಯಿ ಚೈತನ್ಯ, ಆರಂಭದಲ್ಲಿ ಪೊಲೀಸರು ಬಾಲಕಿಯ ತಂದೆಯನ್ನು ವಿಚಾರಣೆ ನಡೆಸಿದಾಗ, ಮಗಳು ಆರೋಗ್ಯ ಕೇಂದ್ರದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಳೆ ಎಂದು ಹೇಳಿ ದಾರಿ ತಪ್ಪಿಸಲು ಯತ್ನಿಸಿದ್ದಾನೆ. ಆದರೆ ತನಿಖಾಧಿಕಾರಿಗಳು ಗಂಭೀರವಾಗಿ ವಿಚಾರಣೆ ನಡೆಸಿದಾಗ, ತನ್ನ ಮಗಳನ್ನು ತಾನೇ ಕೊಂದಿರುವುದಾಗಿ ಪಾಂಡುರಂಗ ಒಪ್ಪಿಕೊಂಡಿದ್ದಾನೆ ಎಂದು ತಿಳಿಸಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ನಿಜಾಮಾಬಾದ್ ಪೊಲೀಸರು ಪಾಂಡುರಂಗ ಕೊಂಡ್ಮಂಗಳೆ ಹಾಗೂ ಸರಪಂಚ್ ಗಣೇಶ್ ಶಿಂಧೆಯನ್ನು ಬಂಧಿಸಿದ್ದಾರೆ. ಈ ಅಮಾನುಷ ಕೃತ್ಯವು ಚುನಾವಣೆಗಾಗಿ ಮಾನವೀಯತೆಯನ್ನೇ ಮರೆತ ಸ್ಥಿತಿಯನ್ನು ತೋ–ರಿಸುತ್ತಿದ್ದು, ಮಹಾರಾಷ್ಟ್ರ ಮತ್ತು ನಿಜಾಮಾಬಾದ್ ಜಿಲ್ಲೆ ಸೇರಿದಂತೆ ಹಲವು ಕಡೆಗಳಲ್ಲಿ ಭಾರೀ ಆಕ್ರೋಶ ವ್ಯಕ್ತವಾಗಿದೆ. ಪೊಲೀಸರು ಪ್ರಕರಣದ ಎಲ್ಲಾ ಆಯಾಮಗಳ ಕುರಿತು ತನಿಖೆ ಮುಂದುವರಿಸಿದ್ದಾರೆ.

## ಪತ್ನಿಯೊಂದಿಗೆ ಅನೈತಿಕ ಸಂಬಂಧ ಶಂಕೆ
## ಮದ್ಯ ಕುಡಿಸಿ ಸ್ನೇಹಿತನನ್ನು ಕಲ್ಲಿನಿಂದ ಜಜ್ಜಿ ಹತ್ಯೆ



**ಬಾಗಲಕೋಟೆ:**ಜಿಲ್ಲೆಯ ಬಾದಾಮಿ ತಾಲ್ಲೂಕಿನ ಖಾನಾಪುರ ಎಸ್‌ಕೆ ಗ್ರಾಮದ ಸಮೀಪದ ಮಾವಿನ ತೋಟದಲ್ಲಿ, ಪತ್ನಿಯೊಂದಿಗೆ ಸ್ನೇಹಿತನಿಗೆ ಅನೈತಿಕ ಸಂಬಂಧವಿದೆ ಎಂಬ ಶಂಕೆಯಿಂದ ಉದ್ಭವಿಸಿದ ದ್ವೇಷ ಭೀಕರ ಕೊಲೆಯಲ್ಲಿ ಅಂತ್ಯಗೊಂಡಿರುವ ಘಟನೆ ಬೆಳಕಿಗೆ ಬಂದಿದೆ. ಯುವಕನೊಬ್ಬ ತನ್ನ ಆತ್ಮೀಯ ಸ್ನೇಹಿತನನ್ನೇ ಕಲ್ಲಿನಿಂದ ಜಜ್ಜಿ ನಿರ್ದಯವಾಗಿ ಹತ್ಯೆ ಮಾಡಿರುವುದು ಗ್ರಾಮಸ್ಥರನ್ನು ಬೆಚ್ಚಿಬೀಳುವಂತೆ ಮಾಡಿದೆ.

ಈ ಘಟನೆಯಲ್ಲಿ ಹತ್ಯೆಗೀಡಾದ ವ್ಯಕ್ತಿಯನ್ನು ಖಾನಾಪುರ ಎಸ್‌ಕೆ ಗ್ರಾಮದ ನಿವಾಸಿ ಸೋಮಶೇಖರ್ ಕಿಳ್ಳಿಕೇತರ (45) ಎಂದು ಗುರುತಿಸಲಾಗಿದೆ. ಆರೋಪಿ ಸಂಜೀವ್ ಕಿಳ್ಳಿಕೇತರ (28) ಕೂಡ ಬಾದಾಮಿ ತಾಲ್ಲೂಕಿನ ಕಾಕನೂರು ಗ್ರಾಮದ ನಿವಾಸಿಯಾಗಿದ್ದು, ಮೃತ ಸೋಮಶೇಖರ್‌ನ ಸ್ನೇಹಿತನಾಗಿದ್ದಾನೆ. ವರ್ಷಗಳಿಂದ ಪರಿಚಯ ಹೊಂದಿದ್ದ ಸ್ನೇಹಿತರ ನಡುವೆ ಉದ್ಭವಿಸಿದ ಅನುಮಾನ ಮತ್ತು ದ್ವೇಷವೇ ಈ ಕೃತ್ಯಕ್ಕೆ ಕಾರಣವಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಪೊಲೀಸ್ ತನಿಖೆಯ ಪ್ರಕಾರ, ಸಂಜೀವ್‌ನ ಪತ್ನಿಯೊಂದಿಗೆ ಸೋಮಶೇಖರ್ ಅತಿಯಾದ ಸಲುಗೆಯಿಂದ ವರ್ತಿಸುತ್ತಿದ್ದನು ಹಾಗೂ ನಿರಂತರವಾಗಿ ಫೋನ್‌ನಲ್ಲಿ ಸಂಪರ್ಕದಲ್ಲಿದ್ದ ಎನ್ನಲಾಗಿದೆ. ಈ ಬೆಳವಣಿಗೆ ಸಂಜೀವ್‌ಗೆ ತೀವ್ರ ಅನುಮಾನ ಹುಟ್ಟಿಸಿದ್ದು, ಈ ವಿಷಯವಾಗಿ ಅವನು ಸ್ನೇಹಿತನಿಗೆ ದೂರ ಇರಲು ಎಚ್ಚರಿಕೆ ನೀಡಿದ್ದಲ್ಲದೆ, ಜೀವ ಬೆದರಿಕೆಯನ್ನೂ ಹಾಕಿದ್ದಾನೆ ಎಂದು ತಿಳಿದುಬಂದಿದೆ. ಆದರೂ ಸಹ, ಇಬ್ಬರೂ ಹಳೆಯ ಸ್ನೇಹಿತರಾಗಿದ್ದರಿಂದ ಮದ್ಯಪಾನಕ್ಕೆ ಆಗಾಗ್ಗೆ ಒಟ್ಟಿಗೆ ಸೇರುತ್ತಿದ್ದರು.

ಭಾನುವಾರ ಮಧ್ಯಾಹ್ನ ಸುಮಾರು 3.30ರ ವೇಳೆಗೆ, ಇಬ್ಬರೂ ಖಾನಾಪುರ ಎಸ್‌ಕೆ ಗ್ರಾಮದ ಸಮೀಪದ ಮಾವಿನ ತೋಟದಲ್ಲಿ ಮದ್ಯಪಾನಕ್ಕೆ ಸೇ–ರಿದ್ದಾರೆ. ಈ ವೇಳೆ ಸಂಜೀವ್, ಸೋಮಶೇಖರ್‌ಗೆ ಕಂಠಪೂರ್ತಿ ಮದ್ಯ ಕುಡಿಸಿ, ಆತ ಸಂಪೂರ್ಣ ನಶೆಯಲ್ಲಿದ್ದ ಸಮಯವನ್ನು ಬಳಸಿಕೊಂಡು ಕಲ್ಲಿನಿಂದ ತಲೆ ಹಾಗೂ ಮುಖವನ್ನು ಜಜ್ಜಿ ಹತ್ಯೆ ಮಾಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಹತ್ಯೆಯ ಬಳಿಕ ಆರೋಪಿ ಸ್ಥಳದಿಂದ ಪರಾ–ರಿಯಾಗಲು ಯತ್ನಿಸಿದ್ದಾನೆ ಎನ್ನಲಾಗಿದೆ.

ಭಾನುವಾರದಿಂದ ಸೋಮಶೇಖರ್ ಕಾಣೆಯಾಗಿದ್ದ ಹಿನ್ನೆಲೆಯಲ್ಲಿ ಕುಟುಂಬಸ್ಥರು ಹಾಗೂ ಗ್ರಾಮಸ್ಥರು ಶೋಧ ಕಾರ್ಯ ಕೈಗೊಂಡಿದ್ದರು. ಬಳಿಕ ಮಾವಿನ ತೋಟದಲ್ಲಿ ಶವ ಪತ್ತೆಯಾಗಿದ್ದು, ಪರಿಶೀಲನೆಯ ವೇಳೆ ಇದು ಕೊಲೆ ಪ್ರಕರಣ ಎಂಬುದು ದೃಢಪಟ್ಟಿದೆ. ಶವದ ಮೇಲೆ ತೀವ್ರ ಹಲ್ಲೆಯ ಗುರುತುಗಳು ಕಂಡುಬಂದಿದ್ದು, ಘಟನೆಯ ಕ್ರೌರ್ಯವನ್ನು ತೋ–ರಿಸುತ್ತವೆ.

ಘಟನಾ ಸ್ಥಳಕ್ಕೆ ಬಾದಾಮಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಬಾಗಲಕೋಟೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯೆಲ್ ಕೂಡ ಸ್ಥಳಕ್ಕೆ ಆಗಮಿಸಿ ಮಾಹಿತಿ ಸಂಗ್ರಹಿಸಿದ್ದಾರೆ. ಶವ ಪತ್ತೆಯಾದ ಬಳಿಕ ಮೃತನ ಕುಟುಂಬಸ್ಥರು ಸ್ಥಳದಲ್ಲೇ ಎಸ್‌ಪಿ ಎದುರು ಕಣ್ಣೀರಿಟ್ಟ ಘಟನೆ ಮನಕಲಕುವಂತಿತ್ತು.

ಈ ಸಂಬಂಧ ಬಾದಾಮಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಳ್ಳಲಾಗಿದ್ದು, ಆರೋಪಿಯಾದ ಸಂಜೀವ್ ಕಿಳ್ಳಿಕೇತರನನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ಹತ್ಯೆಗೆ ಕಾರಣವಾದ ಹಿನ್ನಲೆ, ಘಟನೆಯ ನಿಖರ ಸಂದರ್ಭಗಳು ಹಾಗೂ ಇತರ ಅಂಶಗಳ ಕುರಿತು ಪೊಲೀಸರು ಸವಿಸ್ತಾರ ತನಿಖೆ ಮುಂದುವರಿಸಿದ್ದಾರೆ.

## ಪೊಲೀಸ್ ಸಿಬ್ಬಂದಿ ಮೇಲೆ ಹಲ್ಲೆ ಪ್ರಕರಣ
## ಕಾಂಗ್ರೆಸ್ ಮುಖಂಡನ ಇನ್ನಿಬ್ಬರು ಪುತ್ರರ ಬಂಧನ

**ದಾವಣಗೆರೆ:** ಜನವರಿ 31ರಂದು ನಡೆದ ಪೊಲೀಸ್ ಸಿಬ್ಬಂದಿ ಮೇಲಿನ ಹಲ್ಲೆ ಪ್ರಕರಣದ ತನಿಖೆಯಲ್ಲಿ ಮಹತ್ವದ ಬೆಳವಣಿಗೆ ನಡೆದಿದೆ. ಕಾಂಗ್ರೆಸ್ ಮುಖಂಡ ಅಯೂಬ್ ಅವರ ಇನ್ನಿಬ್ಬರು ಪುತ್ರರಾದ ಹುಸೇನ್ (26) ಮತ್ತು ಹಮ್ಮಾ (24) ಅವರನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ.

ಜನವರಿ 31ರಂದು ದಾವಣಗೆರೆ ನಗರದ ಬಡಾವಣೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿತ್ತು. ಕರ್ತವ್ಯ ನಿರತ ಪೊಲೀಸರ ಮೇಲೆ ಹಲ್ಲೆ ನಡೆಸಿದ ಆರೋಪಿಗಳು, ಘಟನೆಯ ಬಳಿಕ ತಲೆಮರೆಸಿಕೊಂಡಿದ್ದರು. ದಾವಣಗೆರೆ ಬಡಾವಣೆ ಪೊಲೀಸ್ ಠಾಣೆಯ ಇನ್ಸೆಕ್ಟರ್ ಗಾಯತ್ರಿ, ಕಾನ್ಸ್ಟೇಬಲ್‌ಗಳಾದ ಹರೀಶ್ ಮತ್ತು ಕೆಂಚಪ್ಪ ಅವರ ಮೇಲೆ ಹಲ್ಲೆ ನಡೆಸಲಾಗಿತ್ತು. ಹಲ್ಲೆಯಲ್ಲಿ ಪೊಲೀಸ್ ಸಿಬ್ಬಂದಿಗೆ ಗಾಯಗಳಾಗಿದ್ದು, ಅವರನ್ನು ತಕ್ಷಣ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿತ್ತು.ದಾವಣಗೆರೆ: ದಾವಣಗೆರೆಯಲ್ಲಿ ಜನವರಿ 31ರಂದು ನಡೆದ ಪೊಲೀಸ್ ಸಿಬ್ಬಂದಿ ಮೇಲಿನ ಹಲ್ಲೆ ಪ್ರಕರಣದ ತನಿಖೆಯಲ್ಲಿ ಮಹತ್ವದ ಬೆಳವಣಿಗೆ ನಡೆದಿದೆ. ಕಾಂಗ್ರೆಸ್ ಮುಖಂಡ ಅಯೂಬ್ ಅವರ ಇನ್ನಿಬ್ಬರು ಪುತ್ರರಾದ ಹುಸೇನ್ (26) ಮತ್ತು ಹಮ್ಮಾ (24) ಅವರನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ.

ಜನವರಿ 31ರಂದು ದಾವಣಗೆರೆ ನಗರದ



ಬಡಾವಣೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿತ್ತು. ಕರ್ತವ್ಯ ನಿರತ ಪೊಲೀಸರ ಮೇಲೆ ಹಲ್ಲೆ ನಡೆಸಿದ ಆರೋಪಿಗಳು, ಘಟನೆಯ ಬಳಿಕ ತಲೆಮರೆಸಿಕೊಂಡಿದ್ದರು. ದಾವಣಗೆರೆ ಬಡಾವಣೆ ಪೊಲೀಸ್ ಠಾಣೆಯ ಇನ್ಸೆಕ್ಟರ್ ಗಾಯತ್ರಿ, ಕಾನ್ಸ್ಟೇಬಲ್‌ಗಳಾದ ಹರೀಶ್ ಮತ್ತು ಕೆಂಚಪ್ಪ ಅವರ ಮೇಲೆ ಹಲ್ಲೆ ನಡೆಸಲಾಗಿತ್ತು. ಹಲ್ಲೆಯಲ್ಲಿ ಪೊಲೀಸ್ ಸಿಬ್ಬಂದಿಗೆ ಗಾಯಗಳಾಗಿದ್ದು, ಅವರನ್ನು ತಕ್ಷಣ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿತ್ತು.ಬಂಧಿತ ಆರೋಪಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲು ಸಿದ್ಧತೆ ನಡೆಸಲಾಗಿದ್ದು, ಮುಂದಿನ ದಿನಗಳಲ್ಲಿ ತನಿಖೆಯ ಆಧಾರದ ಮೇಲೆ ಇನ್ನಷ್ಟು ಬಂಧನಗಳು ಸಂಭವಿಸುವ ಸಾಧ್ಯತೆಯಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

### ನಿಯಮ ಪಾಲಿಸದಿದ್ರೆ ದೇಶ ಬಿಟ್ಟು ತೊಲಗಿ ವಾಟ್ಸಪ್‌ಗೆ ಸುಪ್ರೀಂ ವಾರ್ನಿಂಗ್

**ನವದೆಹಲಿ:** ಬಳಕೆದಾರರ ಗೌಪ್ಯತೆ ಉಲ್ಲಂಘನೆ ಆರೋಪದ ಹಿನ್ನೆಲೆಯಲ್ಲಿ, ದೇಶದ ಕಾನೂನುಗಳನ್ನು ಪಾಲಿಸಲು ಸಾಧ್ಯವಾಗದಿದ್ದರೆ ಭಾರತ ತೊರೆಯುವಂತೆ ಒಜಣಚಿ ಸಂಸ್ಥೆಗೆ ಸುಪ್ರೀಂ ಕೋರ್ಟ್ ಖಡಕ್ ಎಚ್ಚರಿಕೆ ನೀಡಿದೆ.

2021ರ ಗೌಪ್ಯತಾ ನೀತಿ ಕುರಿತ ಅರ್ಜಿಯ ವಿಚಾರಣೆಯ ವೇಳೆ, ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ ಪೀಠವು, ಬಳಕೆದಾರರ ಡೇಟಾವನ್ನು ವಾಣಿಜ್ಯ ಉದ್ದೇಶಕ್ಕೆ ದುರುಪಯೋಗ ಪಡಿಸಿಕೊಂಡ ಆರೋಪದ ಮೇಲೆ ಭಾರತದ ಸ್ಪರ್ಧಾ ಆಯೋಗ ವಿಧಿಸಿದ್ದ 213 ಕೋಟಿ ದಂಡವನ್ನು ಎತ್ತಿಹಿಡಿದಿದೆ.

ಬಹುರಾಷ್ಟ್ರೀಯ ಕಂಪನಿಗಳ ವ್ಯವಹಾರ ಹಿತಾಸಕ್ತಿಗಾಗಿ ನಾಗರಿಕರ ಗೌಪ್ಯತೆಯನ್ನು ರಾಜೀ ಮಾಡಿಕೊಳ್ಳಲು ಅವಕಾಶ ನೀಡುವುದಿಲ್ಲ ಎಂದು ಕೋರ್ಟ್ ಸ್ಪಷ್ಟಪಡಿಸಿದೆ.

ಸುದ್ದಿ ಹಾಗೂ ಜಾಹೀರಾತುಗಾಳಿಗಾಗಿ
ಸಂಪರ್ಕಿಸಿ 9538786812\8217606793

## ಕಮಲಾಕರ ಭಟ್ ಗುರೂಜಿ ಜೊತೆ ಮಹಿಳೆ ಅಕ್ರಮ ಸಂಬಂಧ: ದೂರು ನೀಡಿದ್ದಕ್ಕೆ ಹಲ್ಲೆ; ಓರ್ವ ಸಾವು



ಆರೋಪಿ ಕಮಲಾಕರ ಸ್ವಾಮೀಜಿ



ಮೃತ ವ್ಯಕ್ತಿ

**ಕಾರವಾರ:**ಗುರೂಜಿ ಜೊತೆ ಮಹಿಳೆಯ ಅಕ್ರಮ ಸಂಬಂಧದ ಆರೋಪದಿಂದ ಆರಂಭವಾದ ಗಲಾಟೆ ಭೀಕರ ಹಲ್ಲೆ ಮತ್ತು ಕೊಲೆಯಲ್ಲಿ ಅಂತ್ಯಗೊಂಡಿರುವ ಘಟನೆ ಉತ್ತರ ಕನ್ನಡ ಜಿಲ್ಲೆಯ ಸಿದ್ದಾಪುರ ತಾಲೂಕಿನ ಅವರಗುಪ್ಪ ಗ್ರಾಮ ದಲ್ಲಿ ಸಂಭವಿಸಿದೆ. ಈ ಘಟನೆ ಗ್ರಾಮದಲ್ಲಿ ತೀವ್ರ ಆತಂಕ ಹಾಗೂ ಉದ್ವಿಗ್ನ ತೆಯನ್ನುಂಟು ಮಾಡಿದ್ದು, ಅನೈತಿಕ ಸಂಬಂಧದ ದೂರು ನೀಡಿದ್ದ ಕಾರಣಕ್ಕೆ ಹಲ್ಲೆ ನಡೆಸಲಾಗಿದೆ ಎನ್ನಲಾಗುತ್ತಿದೆ. ಘಟನೆಯಲ್ಲಿ ಓರ್ವ ವ್ಯಕ್ತಿ ಸಾವನ್ನಪ್ಪಿದ್ದು, ಇನ್ನಿಬ್ಬರು ಗಂಭೀರವಾಗಿ ಗಾಯ ಗೊಂಡಿದ್ದಾರೆ. ಪ್ರಕರಣ ಸಂಬಂಧ ಪೊಲೀಸರು ಆರೋಪಿಗಳನ್ನು ವಶಕ್ಕೆ ಪಡೆದು ತನಿಖೆ ಮುಂದುವರಿಸಿದ್ದಾರೆ.

**ಘಟನೆಯ ವಿವರ:**ಸುಚಿತ್ರಾ ಎಂಬ ಮಹಿಳೆ ಶಿವಮೊಗ್ಗ ಮೂಲದ ಕಮಲಾಕರ ಭಟ್ ಗುರೂಜಿಯೊಂದಿಗೆ ಅಕ್ರಮ ಸಂಬಂಧ ಹೊಂದಿದ್ದರು ಎನ್ನಲಾಗಿದೆ. ಕಮಲಾಕರ ಭಟ್ ಮೂಲತಃ ಸಿದ್ದಾಪುರ ತಾಲೂಕಿನ ಹೆಮ್ಮನಬೈಲ್ ಗ್ರಾಮದ ನಿವಾಸಿಯಾಗಿದ್ದು, ಸ್ವಾಮೀಜಿಯಾಗಿ ಗುರುತಿಸಿ ಕೊಂಡಿದ್ದಾನೆ. ಈ ಅಕ್ರಮ ಸಂಬಂಧದ ವಿಚಾರವು ಸುಚಿತ್ರಾರ ಪುತ್ರಿಗೆ ತಿಳಿದು ಬಂದಿದ್ದು, ತಾಯಿಯ ಸಂಬಂಧದ ಕುರಿತು ಆಕೆ ತನ್ನ ತಂದೆ ಮಹೇಶ್ ನಾಯ್ಕಗೆ ವಿಷಯ ತಿಳಿಸಿದ್ದಾಳೆ.

ಈವಿಚಾರದಿಂದ ಮನ ಸ್ತಾಪಗೊಂಡ ಮಹೇಶ್ ನಾಯ್ಕ, ನ್ಯಾಯಕ್ಕಾಗಿ ಪೊಲೀಸ್ ಠಾಣೆಗೆ ತೆರಳಿ ಗುರೂಜಿ ಹಾಗೂ ಸಂಬಂಧಿಸಿದವರ ವಿರುದ್ಧ ದೂರು ದಾಖಲಿಸಿದ್ದಾನೆ. ಇದೇ ದೂರು ನೀಡಿದ್ದಕ್ಕೆ ಪ್ರತಿಕಾರವಾಗಿ ಸುಚಿತ್ರಾ, ಆಕೆಯ ತಂದೆ ಲೋಕನಾಥ ಚೌಡಪ್ಪ ನಾಯ್ಕ್ ಹಾಗೂ ಅವರ ಸಹಚರರು ಮಹೇಶ್ ನಾಯ್ಕ ಮತ್ತು ಆತನ ಜೊತೆಗಿದ್ದವರ ಮೇಲೆ ಹಲ್ಲೆ ನಡೆಸಿದ್ದಾರೆ ಎನ್ನಲಾಗಿದೆ.

ಈ ದಾಳಿಯಲ್ಲಿ ಮಹೇಶ್ ನಾಯ್ಕ, ವಸಂತ್ ನಾಯ್ಕ ಹಾಗೂ ಕುಮಾರ್ ಎಂಬವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಗಾಯಗೊಂಡವರನ್ನು ತಕ್ಷಣ ಆಸ್ಪತ್ರೆಗೆ ಸಾಗಿಸಲಾ ಯಿತಾದರೂ, ವಸಂತ್ ನಾಯ್ಕ ಚಿಕಿತ್ಸೆಗಾಗಿ ಆಸ್ಪತ್ರೆಗೆ ಕರೆದೊಯ್ಯುವ ಮಾರ್ಗ ಮಧ್ಯೆಯೇ ಮೃತಪಟ್ಟಿದ್ದಾರೆ. ಮಹೇಶ್ ನಾಯ್ಕ ಮತ್ತು ಕುಮಾರ್ ಅವರಿಗೆ ಸ್ಥಳೀಯ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದ್ದು, ಅವರ ಸ್ಥಿತಿ ಗಂಭೀರವಾಗಿದೆ ಎಂದು ವೈದ್ಯರು ತಿಳಿಸಿದ್ದಾರೆ.

ಇನ್ನು ಪ್ರಕರಣ ನಡೆದ ಬಳಿಕ ಕೃತ್ಯವೆಸಗಿ ಪರಾರಿಯಾಗಲು ಯತ್ನಿಸಿದ್ದ ಗುರೂಜಿ ಸೇರಿ ಒಟ್ಟು ಏಳು ಜನರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಇವರಲ್ಲಿ ಮೂವರು ಶಿವಮೊಗ್ಗದಲ್ಲಿ ಹಾಗೂ ನಾಲ್ವರು ಸಿದ್ದಾಪುರದಲ್ಲಿ ಪೊಲೀಸರ ಬಲೆಗೆ ಬಿದ್ದಿದ್ದಾರೆ. ಪ್ರಕರಣದಲ್ಲಿ ಎ1 ಆಗಿ ಸುಚಿತ್ರಾ, ಎ2 ಲೋಕನಾಥ ಚೌಡಪ್ಪ ನಾಯ್ಕ್, ಎ3 ಅಪರಿಚಿತರು ಹಾಗೂ ಎ4 ಕಮಲಾಕರ ಭಟ್ ಸ್ವಾಮೀಜಿ ಎಂದು ಗುರುತಿಸಲಾಗಿದ್ದು, ಘಟನೆ ಸಂಬಂಧ ಸಿದ್ದಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಘಟನೆಯ ಹಿನ್ನಲೆ, ಹಲ್ಲೆಗೆ ಕಾರಣವಾದ ನಿಖರ ಸಂದರ್ಭಗಳು ಹಾಗೂ ಇತರರು ಭಾಗಿಯಾಗಿರುವ ಬಗ್ಗೆ ಪೊಲೀಸರು ಸವಿಸ್ತಾರ ತನಿಖೆ ನಡೆಸುತ್ತಿದ್ದು, ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

## ಆಂಬುಲೆನ್ಸ್ ಸಿಗದೆ ನಡುರಸ್ತೆಯಲ್ಲೇ ಮಗುವಿಗೆ ಜನನ

**ನವದೆಹಲಿ:**ಹೊಟ್ಟೆ ನೋವಿನಿಂದ ತೀವ್ರವಾಗಿ ಒದ್ದಾಡುತ್ತಿದ್ದ ಗರ್ಭಿಣಿ ಮಹಿಳೆಗೆ ಅಂ–ದುಕೊಂಡದ್ದಕ್ಕಿಂತ ಮುಂಚಿತವಾಗಿಯೇ ಹೆರಿಗೆ ನೋವು ಕಾಣಿಸಿಕೊಂಡಿತು. ತಕ್ಷಣವೇ ತಮ್ಮ ಹಳ್ಳಿಯಿಂದ ಆಸ್ಪತ್ರೆಗೆ ತೆರಳಬೇಕಾದ ಅನಿವಾರ್ಯತೆ ಎದುರಾದರೂ, ಆ ಗ್ರಾಮಕ್ಕೆ ಸರಿಯಾದ ರಸ್ತೆ ಸೌಲಭ್ಯಗಳಿಲ್ಲದ ಕಾರಣ ಆಂಬುಲೆನ್ಸ್‌ಆಗಮಿಸುವುದೇ ಕಷ್ಟಸಾಧ್ಯವಾಗಿತ್ತು. ಬೇರೆ ಯಾವುದೇ ವಾಹನ ವ್ಯವಸ್ಥೆಯೂ ಇಲ್ಲದ ಹಿನ್ನೆಲೆಯಲ್ಲಿ ಕುಟುಂಬಸ್ಥರು 108 ಆಂಬುಲೆನ್ಸ್ ಸೇವೆಗೆ ಮನವಿ ಮಾಡಿದರು.

ಆಂಬುಲೆನ್ಸ್ ಸಿಬ್ಬಂದಿ "ಬರುತ್ತೇವೆ" ಎಂದು ತಿಳಿಸಿದ್ದರಿಂದ, ನೋವಿನಿಂದ ಬಳಲುತ್ತಿದ್ದ ಮಹಿಳೆ ರಸ್ತೆಬದಿಯಲ್ಲೇ ನಿಂತು ಕಾಯತೊಡಗಿದರು. ಆದರೆ ಎಷ್ಟೇ ಸಮಯ ಕಾದರೂ ಆಂಬುಲೆನ್ಸ್ ಸ್ಥಳಕ್ಕೆ ಆಗಮಿಸಲಿಲ್ಲ. ನೋವು ಹೆಚ್ಚುತ್ತಾ ಹೋದಂತೆ ಅವರು ಇನ್ನಷ್ಟು ಸಮಯ ನಿಲ್ಲಲು ಸಾಧ್ಯವಾಗದೆ, ರಸ್ತೆಬದಿಯಲ್ಲೇ ಕುಳಿತುಕೊಳ್ಳಬೇಕಾಯಿತು. ಪರಿಸ್ಥಿತಿಯ ಗಂಭೀರತೆಯನ್ನು ಅರಿತ ಗ್ರಾಮಸ್ಥ ಮಹಿಳೆಯರು ತಾತ್ಕಾಲಿಕವಾಗಿ ಟಾರ್ಪಲ್ ಹಾಳೆಗಳನ್ನು ಕಟ್ಟಿಕೊಂಡು ಪರದೆ ರೂಪಿಸಿ, ಟಾರ್ಚ್ ಬೆಳಕಿನ ಸಹಾಯದಿಂದಲೇ ರಸ್ತೆಬದಿಯಲ್ಲೇ ಹೆರಿಗೆ ಮಾಡಿಸಿದರು.

ಈ ಮನಕಲಕುವ ಘಟನೆ **ವಿದಿಶಾ ಜಿಲ್ಲೆ**ಯಲ್ಲಿ ನಡೆದಿದೆ. ಆಧುನಿಕ ಆರೋಗ್ಯ ಸೇವೆಗಳ ಕೊರತೆ, ಕೆಟ್ಟ ರಸ್ತೆ ಸ್ಥಿತಿ ಮತ್ತು ತುರ್ತು ಸೇವೆಗಳ ಒಂದಾಗಿ, ಗರ್ಭಿಣಿ ಮಹಿಳೆ ಟಾರ್ಚ್ ಬೆಳಕಿನಲ್ಲಿ ರಸ್ತೆಬದಿಯಲ್ಲೇ ಮಗುವಿಗೆ ಜನ್ಮ ನೀಡುವ ಪರಿಸ್ಥಿತಿ



ನಿರ್ಮಾಣವಾಯಿತು.

ಕುಟುಂಬದವರ ಮಾಹಿತಿ ಪ್ರಕಾರ, ಶನಿವಾರ ಬೆಳಗಿನ ಜಾವ ಸುಮಾರು 3 ಗಂಟೆಗೆ ಮಹಿಳೆಗೆ ತೀವ್ರ ಹೆರಿಗೆ ನೋವು ಆರಂಭವಾಗಿತ್ತು. ತಕ್ಷಣವೇ 108ಆಂಬುಲೆನ್ಸ್‌ಸೇವೆಗೆ ಪದೇಪದೇ ಕರೆ ಮಾಡಲಾಗಿದ್ದು, ಸುಮಾರು ಮೂರು ಗಂಟೆಗಳ ಕಾಲ ಕುಟುಂಬಸ್ಥರು ನಿರೀಕ್ಷೆಯಲ್ಲೇ ಕಾದರು. ಆದರೆ ಯಾವುದೇ ಆಂಬುಲೆನ್ಸ್ ಸ್ಥಳಕ್ಕೆ ಬರಲಿಲ್ಲ. ಈ ನಡುವೆ ಮಹಿಳೆಯ ನೋವು ಮತ್ತಷ್ಟು ಹೆಚ್ಚಾಗಿದ್ದು, ತಡ ಮಾಡುವುದು ಅಪಾಯಕಾರಿಯಾಗಬಹುದು ಎಂಬುದನ್ನು ಮನಗಂಡ ಕುಟುಂಬವು, ಕಾಲ್ನಡಿಗೆಯಲ್ಲಿಯೇ ಆಸ್ಪತ್ರೆಗೆ ಕರೆದೊಯ್ಯಲು ನಿರ್ಧರಿಸಿತು.

ಆದರೆ, ಮಧ್ಯದಲ್ಲೇ ಹೆರಿಗೆ ನೋವು ತೀವ್ರಗೊಂಡ ಕಾರಣ ಮುಂದೆ ಸಾಗಲು ಸಾಧ್ಯವಾಗದೆ, ರಸ್ತೆಬದಿಯಲ್ಲೇ ಹೆರಿಗೆ ಮಾಡಿಸಬೇಕಾದ ಅನಿವಾರ್ಯತೆ ಎದುರಾಯಿತು. ತೀವ್ರ ಚಳಿಯ ನಡುವೆಯೇ ಆ ಮಹಿಳೆ ರಸ್ತೆಬದಿ ಮಗುವಿಗೆ ಜನ್ಮ ನೀಡಿದರು. ತಾಯಿ ಮತ್ತು ನವಜಾತ ಶಿಶುವನ್ನು ಚಳಿಯಿಂದ ರಕ್ಷಿಸಲು ಗ್ರಾಮಸ್ಥರು ತಕ್ಷಣ ಸ್ಪಂದಿಸಿ, ಬಟ್ಟೆಗಳು, ಪ್ಲಾಸ್ಟಿಕ್ ಹಾಳೆಗಳು ಹಾಗೂ ಲಭ್ಯವಿದ್ದ ಸಾಮಗ್ರಿಗಳನ್ನು ತಂದು ಮುಚ್ಚಿದರು. ಜೊತೆಗೆ ಬೆಂಕಿಯನ್ನು ಹಚ್ಚಿ, ತಾಯಿ–ಮಗುವನ್ನು ಬೆಚ್ಚಗಿಡುವ ಪ್ರಯತ್ನ ಮಾಡಿದರು.

ಬೆಳಗಿನ ಜಾವ ಸುಮಾರು 3.20ರ ವೇಳೆಗೆ ವ್ಯಾನ್ ಚಾಲಕನೊಬ್ಬ ಸ್ಥಳಕ್ಕೆ ಆಗಮಿಸಿ, ಮಾನವೀಯತೆಯ ನೆಲೆಯಲ್ಲಿ ತಾಯಿ ಮತ್ತು ನವಜಾತ ಶಿಶುವನ್ನು ತನ್ನ ವ್ಯಾನ್‌ನಲ್ಲಿ ಆಸ್ಪತ್ರೆಗೆ ಸಾಗಿಸಿದನು. ನಂತರ ಆರೋಗ್ಯ ಇಲಾಖೆಯ ಅಧಿಕಾರಿಗಳು ನೀಡಿದ ಮಾಹಿತಿಯಂತೆ, ತಾಯಿ ಮತ್ತು ಮಗು ಇಬ್ಬರೂ ಸುರಕ್ಷಿತವಾಗಿದ್ದು, ಆರೋಗ್ಯವಾಗಿದ್ದಾರೆ.

ಆದರೂ ಈ ಘಟನೆ ರಾಜ್ಯದಲ್ಲಿ ತುರ್ತು ಆರೋಗ್ಯ ಸೇವೆಗಳ ಕಾರ್ಯಕ್ಷಮತೆ, ಗ್ರಾಮೀಣ ಪ್ರದೇಶಗಳ ರಸ್ತೆ ಸೌಲಭ್ಯಗಳ ಕೊರತೆ ಮತ್ತು ಗರ್ಭಿಣಿಯರ ಸುರಕ್ಷತೆ ಕುರಿತು ಗಂಭೀರ ಹಾಗೂ ಅಹಿತಕರ ಪ್ರಶ್ನೆಗಳನ್ನು ಮತ್ತೊಮ್ಮೆ ಎತ್ತಿ ತೋರಿಸಿದೆ. ತಕ್ಷಣ ಸ್ಪಂದಿಸಬೇಕಾದ ವ್ಯವಸ್ಥೆಗಳು ವಿಫಲವಾದಾಗ, ಸಾಮಾನ್ಯ ನಾಗರಿಕರು ಹೇಗೆ ಅಪಾಯಕರ ಪರಿಸ್ಥಿತಿಗಳನ್ನು ಎದುರಿಸಬೇಕಾಗುತ್ತದೆ ಎಂಬುದಕ್ಕೆ ಇದು ಸ್ಪಷ್ಟ ಉದಾಹರಣೆಯಾಗಿದೆ.

## ನಾನು ಆತ್ಮಹತ್ಯೆಗೆ ಶರಣಾದರೆ ಐಟಿ ಅಧಿಕಾರಿಗಳೇ ಹೊಣೆ: ಕೆಜಿಎಫ್ ಬಾಬು



**ಬೆಂಗಳೂರು:** ಖ್ಯಾತ ಉದ್ಯಮಿ ಸಿ.ಜೆ. ರಾಯ್ ಅವರ ಸಾವಿನ ಬೆನ್ನಲ್ಲೇ ರಾಜ್ಯದ ಉದ್ಯಮ ವಲಯದಲ್ಲಿ ಆತಂಕ ಹೆಚ್ಚಾಗುತ್ತಿರುವ ನಡುವೆ, ಇದೀಗ ಮತ್ತೊಬ್ಬ ಪ್ರಭಾವಿ ಉದ್ಯಮಿ ಕೆಜಿಎಫ್ ಬಾಬು ಆದಾಯ ತೆರಿಗೆ (ಐಟಿ) ಇಲಾಖೆಯ ವಿರುದ್ಧ ಗಂಭೀರ ಹಾಗೂ ಸ್ಫೋಟಕ ಆರೋಪಗಳನ್ನು ಹೊರಡಿಸಿದ್ದಾರೆ. ಮಾಧ್ಯಮವೊಂದಕ್ಕೆ ನೀಡಿದ ವಿಶೇಷ ಸಂದರ್ಶನದಲ್ಲಿ ಅವರು ತಮ್ಮ ಮನಸ್ಸಿನ ನೋವು, ಭಯ ಮತ್ತು ಒತ್ತಡವನ್ನು ಬಹಿರಂಗವಾಗಿ ಹಂಚಿಕೊಂಡಿದ್ದಾರೆ.

"ನಾನು ಆತ್ಮಹತ್ಯೆ ಮಾಡಿಕೊಂಡರೆ ಅದಕ್ಕೆ ಐಟಿ ಅಧಿಕಾರಿಗಳೇ ನೇರವಾಗಿ ಹೊಣೆ" ಎಂದು ಕೆಜಿಎಫ್ ಬಾಬು ಅವರು ಹೇಳಿದ್ದಾರೆ. ಐಟಿ ಇಲಾಖೆಯಿಂದ ನಿರಂತರವಾಗಿ ನೋಟಿಸ್‌ಗಳು, ವಿಚಾರಣೆಗಳು ಹಾಗೂ ಮಾನಸಿಕ ಒತ್ತಡ ಎದು–ರಿಸುತ್ತಿರುವುದಾಗಿ ಅವರು ದೂರಿದ್ದಾರೆ.

"ನಾನು ಸಾವಿರಾರು ಕೋಟಿ ರೂಪಾಯಿಗಳ ಆಸ್ತಿ ಹೊಂದಿರುವ ಉದ್ಯಮಿಯಾಗಿರಬಹುದು. ಆದರೆ ಹಣ ಇದ್ದರೆ ನೆಮ್ಮದಿ ಇಲ್ಲ. ಕಳೆದ ಕೆಲ ತಿಂಗಳುಗಳಿಂದ ನನಗೆ ಜೀವನವೇ ಬೇಸರವಾಗುವ ಮಟ್ಟಿಗೆ ಐಟಿ ಅಧಿಕಾರಿಗಳ ವರ್ತನೆ ನನ್ನನ್ನು ಮಾನಸಿಕವಾಗಿ ಕುಗ್ಗಿಸಿದೆ," ಎಂದು ಅವರು ಬೇಸರ ವ್ಯಕ್ತಪಡಿಸಿದರು. ತನಿಖೆಯ ಹೆಸರಿನಲ್ಲಿ ಅನಗತ್ಯ ಕಿರುಕುಳ ನೀಡಲಾಗುತ್ತಿದೆ, ಅಧಿಕಾರಿಗಳ ವರ್ತನೆ ಚಿತ್ರಹಿಂಸೆಯಂತಿದೆ ಎಂದು ಆರೋಪಿಸಿದರು.

ಇನ್ನೂ ಮಾತನಾಡಿದ ಅವರು, "ಈ ಹಿಂದೆ ನಾನು ಆತ್ಮಹತ್ಯೆ ಮಾಡಿಕೊಳ್ಳುವ ಮನಸ್ಸು ಆಗಿ–ತ್ತು. ಆದರೆ ನನ್ನ ಹೆಂಡತಿ ಮತ್ತು ಮಕ್ಕಳ ಮುಖ ನೋಡಿ ಆ ನಿರ್ಧಾರದಿಂದ ಹಿಂದೆ ಸರಿದೆ. ಆದರೆ ಇದೇ ಒತ್ತಡ ಮುಂದುವರಿದರೆ ಏನಾಗುತ್ತದೆ ಎಂದು ಹೇಳಲು ಸಾಧ್ಯವಿಲ್ಲ," ಎಂದು ತಮ್ಮ ಮನಸ್ಥಿತಿಯನ್ನು ಬಹಿರಂಗಪಡಿಸಿದರು.

ಕೆಜಿಎಫ್ ಬಾಬು ತಮ್ಮ ಹೇಳಿಕೆಯಲ್ಲಿ ಕೆಫೆ ಕಾಫಿ ಡೇ ಸಂಸ್ಥಾಪಕ ಸಿದ್ಧಾರ್ಥ್ ಅವರ ಆತ್ಮಹತ್ಯೆ ಪ್ರಕರಣ ಹಾಗೂ ಇತ್ತೀಚೆಗೆ ನಿಧನರಾದ ಉದ್ಯಮಿ ಸಿ.ಜೆ. ರಾಯ್ ಅವರ ಸಾವಿನ ವಿಚಾರವನ್ನು ಪ್ರಸ್ತಾಪಿಸಿದರು. "ಸಿದ್ಧಾರ್ಥ್ ಅವರ ಸಾವಿನ ಸಮಯದಲ್ಲಿಯೂ ಐಟಿ ಇಲಾಖೆಯ ಒತ್ತಡದ ಮಾತುಗಳು ಕೇಳಿಬಂದಿದ್ದವು. ಇತ್ತೀಚೆಗೆ ಸಿ.ಜೆ. ರಾಯ್ ಅವರ ಸಾವಿನ ಹಿಂದೆಯೂ ಇದೇ ಮಾದರಿಯ ಒತ್ತಡ ಇತ್ತು ಎಂಬ ಮಾತುಗಳು ಹರಿದಾಡುತ್ತಿವೆ. ನನ್ನ ಮೇಲೂ ಇದೇ ರೀತಿ ಭೀತಿ ಇದೆ ಎಂದು ಹೇಳಿಕೆ ನೀಡಿದ್ದಾರೆ..

"ಐಟಿ ಇಲಾಖೆಯ ಕೆಲ ಅಧಿಕಾರಿಗಳು ಅಧಿಕಾರದ ದುರುಪಯೋಗ ಮಾಡುತ್ತಿದ್ದಾರೆ. ಉದ್ಯಮಿಗಳನ್ನು ಅಪರಾಧಿಗಳಂತೆ ನಡೆಸಿಕೊಳ್ಳಲಾಗುತ್ತಿದೆ. ಇದರಿಂದ ಉದ್ಯಮ ವಾತಾವರಣಕ್ಕೆ ಭಾರೀ ಹಾನಿಯಾಗುತ್ತಿದೆ," ಎಂದು ಅವರು ಕಿಡಿಕಾ–ರಿದರು. ಇಂತಹ ವರ್ತನೆಯಿಂದ ಉದ್ಯಮಿಗಳು ಭಯದಲ್ಲಿ ಬದುಕುವ ಪರಿಸ್ಥಿತಿ ನಿರ್ಮಾಣವಾಗಿದ್ದು, ಇದು ಆರ್ಥಿಕ ಅಭಿವೃದ್ಧಿಗೂ ಅಪಾಯಕಾರಿಯಾಗಿದೆ ಎಂದು ಎಚ್ಚರಿಸಿದರು.

ಒಂದು ವೇಳೆ ತನಗೆ ಏನಾದರೂ ಅನಾಹುತ ಸಂಭವಿಸಿದರೆ, ಅದರ ಸಂಪೂರ್ಣ ಹೊಣೆಗಾರಿಕೆ ಐಟಿ ಅಧಿಕಾರಿಗಳು ಹೊಣೆ ಎಂದು ಸ್ಪಷ್ಟವಾಗಿ ಹೇಳಿದ ಕೆಜಿಎಫ್ ಬಾಬು, ಈ ವಿಷಯದಲ್ಲಿ ಸರ್ಕಾರ ಮಧ್ಯಪ್ರವೇಶಿಸಬೇಕು ಎಂದು ಒತ್ತಾಯಿಸಿದರು. "ಐಟಿ ಇಲಾಖೆಯ ಕಾರ್ಯವೈಖರಿಯ ಕುರಿತು ಉನ್ನತ ಮಟ್ಟದ, ಸ್ವತಂತ್ರ ತನಿಖೆ ನಡೆಯಬೇಕು. ಅಧಿಕಾರಿಗಳ ವರ್ತನೆಗೆ ಸ್ಪಷ್ಟ ಮಾರ್ಗಸೂಚಿಗಳು ಅಗತ್ಯ," ಎಂದು ಅವರು ಹೇಳಿದರು.

ಉದ್ಯಮಿಗಳ ಮೇಲೆ ನಡೆಯುತ್ತಿರುವ ನಿರಂತರ ದಾಳಿ, ನೋಟಿಸ್‌ಗಳು ಹಾಗೂ ಮಾನಸಿಕ ಒತ್ತಡಗಳು ಜೀವಕ್ಕೆ ಕುತ್ತು ತರುತ್ತಿವೆ ಎಂದು ಎಚ್ಚರಿಸಿದ ಅವರು, "ಉದ್ಯಮಿಗಳನ್ನು ರಕ್ಷಿಸುವುದು ಸರ್ಕಾರದ ಹೊಣೆ. ಇಲ್ಲವಾದರೆ ಮುಂದೆ ಇನ್ನಷ್ಟು ದುರ್ಘಟನೆಗಳು ನಡೆಯಬಹುದು," ಎಂದು ಆತಂಕ ವ್ಯಕ್ತಪಡಿಸಿದರು.

## ಸಾಲ ಮಾಡಿದ್ದನ್ನು ಪ್ರಶ್ನಿಸಿದ್ದಕ್ಕೆ ಪತ್ನಿಯ ಕತ್ತು ಸೀಳಿದ ಪತಿ

**ಹುಬ್ಬಳ್ಳಿ :** ಸಾಲದ ಮಾಡಿದ್ದನ್ನು ಪ್ರಶ್ನಿಸಿದ್ದಕ್ಕೆ ಪತಿಯೇ ಪತ್ನಿಯ ಕತ್ತು ಸೀಳಿ ಕೊಂದ ಅಮಾನುಷ ಘಟನೆ ಹುಬ್ಬಳ್ಳಿಯ ರಾಮಲಿಂಗೇಶ್ವರ ನಗರದಲ್ಲಿ ನಡೆದಿದೆ. ಗಾರೆ ಕೆಲಸ ಮಾಡಿಕೊಂಡಿದ್ದ ಇರ್ಫಾನ್ ಎಂಬಾತ ಪತ್ನಿ ಮಾಸಬ್ಬಿಯನ್ನು ಚಾಕುವಿನಿಂದ ಕತ್ತು ಸೀಳಿ ಬರ್ಬರವಾಗಿ ಹತ್ಯೆ ಮಾಡಿದ್ದಾನೆ. ಈ ಭೀಕರ ಕೃತ್ಯದಿಂದ ಇಡೀ ಏರಿಯಾವೇ ಬೆಚ್ಚಿಬಿದ್ದಿದೆ. ಮಾಸಬ್ಬಿ ಮತ್ತು ಇರ್ಫಾನ್ ದಂಪತಿಗೆ ಇಬ್ಬರು ಮುದ್ದಾದ ಮಕ್ಕಳು ಇದ್ದರು. ಆದರೂ, ಮನೆಯೊಳಗಿನ ಸಾಲದ ಸಂಕಟ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿತ್ತು. ಗಾರೆ ಕೆಲಸ ಮಾಡಿಕೊಂಡಿದ್ದ ಇರ್ಫಾನ್ ಸಾಲದ ಸುಳಿಯಲ್ಲಿ ಸಿಲುಕಿದ್ದು, ಪತ್ನಿಯ ಚಿನ್ನಾಭರಣಗಳನ್ನು ಅಡವಿಟ್ಟಿದ್ದ. ಇದೇ ವಿಚಾರಕ್ಕೆ ದಂಪತಿಯ ನಡುವೆ ನಿತ್ಯ ಗಲಾಟೆ ನಡೆಯುತ್ತಿತ್ತು ಎನ್ನಲಾಗಿದೆ.

ಎಲ್ಲಿಂದಾದರೂ ಹಣ ತರಬೇಕು ಎಂದು ಪತ್ನಿಗೆ ನಿರಂತರವಾಗಿ ಒತ್ತಡ ಹೇರುತ್ತಿದ್ದ ಇರ್ಫಾನ್, ಸೋಮವಾರ ಮತ್ತೆ ಜಗಳಕ್ಕೆ ಇಳಿದಿದ್ದಾನೆ. ಮಾಸಬ್ಬಿಯ ಸಹೋದರ ಇತ್ತೀಚೆಗೆ 20 ಸಾವಿರ ರೂಪಾಯಿ ಹಣ ನೀಡಿ ಹೋಗಿದ್ದರೂ ಸಹ ತೃಪ್ತನಾಗದೆ ಮತ್ತಷ್ಟು ಹಣಕ್ಕೆ ಪೀಡಿಸಿದ್ದಾನೆ. ಈ ಜಗಳ ತಾರಕಕ್ಕೆ ಏರಿದ್ದು, ಆಕ್ರೋಶಗೊಂಡ ಇರ್ಫಾನ್ ಚಾಕುವಿನಿಂದ ಪತ್ನಿಯ ಕತ್ತು ಸೀಳಿದ್ದಾನೆ.

ರಕ್ತ ಮಡುವಿನಲ್ಲಿ ಹೊರಗೋಡಿ ಅಂಗಲಾಚಿದರೂ ಬಿಡದ ರಾಕ್ಷಸ ರಕ್ತದ ಮಡುವಿನಲ್ಲೇ ಪ್ರಾಣ ಉಳಿಸಿಕೊಳ್ಳಲು ಮಾಸಬ್ಬಿ ಮನೆಯ ಹೊರಗೆ ಓಡಿ ಬಂದಿದ್ದಾಳೆ. ಮನೆಯ ಎದುರಲ್ಲೇ ಬಿದ್ದು ಒದ್ದಾಡುತ್ತಿದ್ದ ಮಾಸಬ್ಬಿಯನ್ನು ಹಿಂಬಾಲಿಸಿದ ಪಾಪಿ, ಮತ್ತೆ ಕತ್ತಿಗೆ ಚಾಕು ಇರಿದು ಸ್ಥಳದಲ್ಲೇ ಕೊಂದಿದ್ದಾನೆ. ಈ ದೃಶ್ಯವನ್ನು ಕಂಡ ಸ್ಥಳೀಯರು ಬೆಚ್ಚಿಬಿದ್ದಿದ್ದಾರೆ.

ಮೃತದೇಹದ ಎದುರು ಪೋಷಕರ ಆಕ್ರಂದನ ಮುಗಿಲು ಮುಟ್ಟಿದ್ದು, ದೃಶ್ಯಗಳು ಮನಕಲಕುವಂತಿದ್ದವು. ಮನೆ ಮಗಳನ್ನು ಕಳೆದುಕೊಂಡ ಕುಟುಂಬ ಕಣ್ಣೀರು ಸುರಿಸುತ್ತಿತ್ತು.

ಕ್ರೌರ್ಯ ಮೆರೆದು ಪೊಲೀಸ್ ಠಾಣೆಗೆ ಬಂದು ಶರಣಾದ ಆರೋಪಿ

ಪತ್ನಿಯನ್ನು ಕೊಂದು ಕ್ರೌರ್ಯ ಮೆರೆದ ಇರ್ಫಾನ್ ನಂತರ ಹುಬ್ಬಳ್ಳಿ ನಗರದ ಕೇಶ್ವಾಪುರ ಪೊಲೀಸ್ ಠಾಣೆಗೆ ತೆರಳಿ ಶರಣಾಗಿದ್ದಾನೆ. ಬಳಿಕ ಆತನನ್ನು ಗೋಕುಲ್ ರೋಡ್ ಪೊಲೀಸ್ ಠಾಣೆಗೆ ಹಸ್ತಾಂತರಿಸಲಾಗಿದ್ದು, ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರಿಸಲಾಗಿದೆ.

ಒಂದೆಡೆ ಅಪ್ಪ ಜೈಲು ಪಾಲಾದರೆ, ಅಮ್ಮ ಶವವಾಗಿ ಮಲಗಿದ್ದಾಳೆ. ಪ್ರಪಂಚವೇ ಅರಿಯದ ಇಬ್ಬರು ಮುದ್ದಾದ ಮಕ್ಕಳು ಅನಾಥರಾಗಿದ್ದು, ಅವರ ಭವಿಷ್ಯ ಪ್ರಶ್ನಾರ್ಥಕವಾಗಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಕೌಟುಂಬಿಕ ಕಲಹಕ್ಕೆ ಹರಿದ ನೆತ್ತರು; ಗಲಾಟೆಯಲ್ಲಿ ಇಬ್ಬರು ಬಲಿ!



**ಮಂಗಳೂರು:**ಕೌಟುಂಬಿಕ ಕಲಹವು ಭೀಕರ ರೂಪ ಪಡೆದು ಇಬ್ಬರ ಸಾವಿಗೆ ಕಾರಣವಾದ ಹೃದಯವಿದ್ರಾವಕ ಘಟನೆ ಕೇರಳದ ಕಾಸರಗೋಡು ಜಿಲ್ಲೆಯ ಮಂಜೇಶ್ವರದ ತೂಮಿನಾಡು ಪ್ರದೇಶದಲ್ಲಿ ನಡೆದಿದೆ. ಈ ಘಟನೆಯಲ್ಲಿ 18 ವರ್ಷದ ಯುವತಿ ಜುಮೈಲ ಹಾಗೂ 55 ವರ್ಷದ ಶೇಕುಂಞ ಮೃತರಾಗಿದ್ದು, ಪ್ರಕರಣದ ಆರೋಪಿಯಾಗಿ ಉಮರ್ ಫಾರೂಕ್ ಎಂಬಾತನನ್ನು ಮಂಜೇಶ್ವರ ಪೊಲೀಸರು ಬಂಧಿಸಿದ್ದಾರೆ. ಜಗಳವನ್ನು ಶಮನಗೊಳಿಸಲು ಮುಂದಾದ ಯುವತಿ ಮೊದಲಿಗೆ ಪ್ರಾಣ ಕಳೆದುಕೊಂಡರೆ, ಗಂಭೀರವಾಗಿ ಗಾಯಗೊಂಡಿದ್ದ ಮತ್ತೊಬ್ಬರು ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ.

ಪೊಲೀಸರ ಮಾಹಿತಿ ಪ್ರಕಾರ, ಉಮರ್ ಫಾರೂಕ್ ಮತ್ತು ಆತನ ಪತ್ನಿ ತಾಹಿರ ನಡುವೆ ದೀರ್ಘಕಾಲದಿಂದ ಕೌಟುಂಬಿಕ ಕಲಹ ನಡೆಯುತ್ತಿತ್ತು ಎನ್ನಲಾಗಿದೆ. ಈ ಕಾರಣದಿಂದ ತಾಹಿರ ತನ್ನ ಪುತ್ರಿ ಜುಮೈಲ ಜೊತೆ ಫಾರೂಕ್‌ನ ನಾದಿನಿಯ ಮನೆಯಲ್ಲಿ ವಾಸವಾಗಿದ್ದಳು. ಕಲಹ ತೀವ್ರಗೊಂಡ ಹಿನ್ನೆಲೆ ವಿಚ್ಛೇದನದ ಮಾತುಕತೆ ಕೂಡ ನಡೆದಿದ್ದು, ಈ ಸಂದರ್ಭ ಉಮರ್ ಫಾರೂಕ್ ತನ್ನ ಹೆಸ-ರಿನಲ್ಲಿ ಆಸ್ತಿ ವರ್ಗಾವಣೆ ಮಾಡಿಕೊಡಬೇಕೆಂದು ಬೇಡಿಕೆ ಇಟ್ಟಿದ್ದ ಎನ್ನಲಾಗಿದೆ. ಇದೇ ವಿಚಾರ ಕುಟುಂಬದೊಳಗೆ ಮತ್ತಷ್ಟು ಉದ್ವಿಗ್ನತೆಗೆ ಕಾರಣವಾಗಿದೆ.

ನಿನ್ನೆ ಈ ಆಸ್ತಿ ವಿಚಾರವಾಗಿ ಉಮರ್ ಫಾರೂಕ್ ಮತ್ತು ಆತನ ಬಾವ ನಡುವೆ ಮಾತಿನ ಜಗಳ ಆರಂಭವಾಗಿದ್ದು, ಕ್ಷಣಾರ್ಧದಲ್ಲೇ ಅದು ಗಂಭೀರ ಸ್ವರೂಪ ಪಡೆದುಕೊಂಡಿದೆ. ಜಗಳ ವಿಕೋಪಕ್ಕೆ ತಿರುಗುತ್ತಿದ್ದಾಗ ಅದನ್ನು ತಡೆಯಲು ಮುಂದಾದ ಯುವತಿ ಜುಮೈಲ ಮೇಲೆ ಕತ್ತಿಯಿಂದ ದಾಳಿ ನಡೆದಿದೆ. ಗಂಭೀರವಾಗಿ ಗಾಯಗೊಂಡ ಜುಮೈಲ ಸ್ಥಳದಲ್ಲೇ ಕುಸಿದು ಬಿದ್ದು, ಚಿಕಿತ್ಸೆ ನೀಡುವಷ್ಟರಲ್ಲಿ ಮೃತಪಟ್ಟಿದ್ದಾಳೆ. ಈ ವೇಳೆ ಶೇಕುಂಞ ಕೂಡ ಗಂಭೀರವಾಗಿ ಗಾಯಗೊಂಡಿದ್ದು, ಅವರನ್ನು ಆಸ್ಪತ್ರೆಗೆ ದಾಖಲಿಸಲಾಯಿತಾದರೂ ಚಿಕಿತ್ಸೆ ಫಲಕಾ-ರಿಯಾಗದೆ ಅವರು ಸಹ ಸಾವನ್ನಪ್ಪಿದ್ದಾರೆ.

ಇನ್ನು ಆರೋಪಿಯಾದ ಉಮರ್ ಫಾರೂಕ್ ಕೆಲ ತಿಂಗಳ ಹಿಂದಷ್ಟೇ ವಿದೇಶದಿಂದ ಊರಿಗೆ ಮರಳಿದ್ದಾನೆ ಎನ್ನಲಾಗಿದ್ದು, ಇತ್ತೀಚಿನ ದಿನಗಳಲ್ಲಿ ಗಾಂಜಾ ಸೇರಿದಂತೆ ಮಾದಕ ದ್ರವ್ಯಗಳ ವ್ಯಸನಿಯಾಗಿದ್ದ ಎಂಬ ಆರೋಪವೂ ಕೇಳಿಬಂದಿದೆ. ಈ ಹಿನ್ನೆಲೆ ಘಟನೆಗೆ ಮಾದಕ ವ್ಯಸನದ ಪ್ರಭಾವವೂ ಇರಬಹುದೆಂಬ ಅನುಮಾನವನ್ನು ಪೊಲೀಸರು ಪರಿಶೀಲಿಸುತ್ತಿದ್ದಾರೆ.

ಪ್ರಕರಣ ಸಂಬಂಧ ಆರೋಪಿಯನ್ನು ಕಸ್ಟಡಿಗೆ ಪಡೆದುಕೊಂಡಿರುವ ಮಂಜೇಶ್ವರ ಪೊಲೀಸರು ಸವಿಸ್ತಾರ ವಿಚಾರಣೆ ನಡೆಸುತ್ತಿದ್ದು, ಘಟನೆಯ ನಿಖರ ಹಿನ್ನೆಲೆ, ಬಳಸಿದ ಆಯುಧ ಮತ್ತು ಇತರ ಅಂಶಗಳ ಕುರಿತು ತನಿಖೆ ಮುಂದುವರಿಸಿದ್ದಾರೆ. ಒಂದೇ ಕುಟುಂಬದಲ್ಲಿ ನಡೆದ ಈ ದ್ವಿಮರಣದಿಂದ ಸಂಬಂಧಿಕರ ಆಕ್ರಂದನ ಮುಗಿಲು ಮುಟ್ಟಿದ್ದು, ಆರೋಪಿ ಉಮರ್ ಫಾರೂಕ್‌ಗೆ ಕಠಿಣ ಶಿಕ್ಷೆ ವಿಧಿಸಬೇಕೆಂಬ ಆಗ್ರಹ ಸ್ಥಳೀಯರಿಂದ ಕೇಳಿಬರುತ್ತಿದೆ.

# ಜಮೀನು ಒತ್ತುವರಿ ವಿಚಾರಕ್ಕೆ ಗಲಾಟೆ ತಮ್ಮನ ತಲೆ ಒಡೆದು ಕೊಂದ ಅಣ್ಣ



**ದಾವಣಗೆರೆ:** ಜಮೀನು ಒತ್ತುವರಿ ವಿಚಾರಕ್ಕೆ ಸಂಬಂಧಿಸಿದಂತೆ ನಡೆದ ಗಂಭೀರ ಗಲಾಟೆ ಕೊಲೆಯಲ್ಲಿ ಅಂತ್ಯಗೊಂಡ ಘಟನೆ ದಾವಣಗೆರೆ ತಾಲೂಕಿನ ಮಾಯಕೊಂಡ ಗ್ರಾಮದಲ್ಲಿ ನಡೆದಿದೆ. ಸಹೋದರರ ನಡುವೆ ನಡೆದ ಜಮೀನು ವಿವಾದವು ಹಠಾತ್ ಹಿಂಸಾತ್ಮಕ ಸ್ವರೂಪ ಪಡೆದುಕೊಂಡಿದ್ದು, ಇದರಿಂದ ಒಬ್ಬ ವ್ಯಕ್ತಿ ತನ್ನ ಪ್ರಾಣ ಕಳೆದುಕೊಳ್ಳುವಂತಾಗಿದೆ.

ಮೃತರನ್ನು ಸಿ.ಕೆ. ನೀಲಪ್ಪ (62) ಎಂದು ಗುರುತಿಸಲಾಗಿದ್ದು, ಆರೋಪಿಯಾಗಿರುವುದು ಅವರ ಸಹೋದರ ಸಿ.ಕೆ. ಚಂದ್ರಪ್ಪ ಎಂಬುದು ತಿಳಿದುಬಂದಿದೆ. ಜಮೀನಿನ ಒತ್ತುವರಿ ಹಾಗೂ ಹಕ್ಕು ವಿಚಾರವಾಗಿ ಇಬ್ಬರ ನಡುವೆ ಕಳೆದ ಕೆಲಕಾಲದಿಂದಲೂ ತೀವ್ರವಾದ ವೈಮನಸ್ಸು ಇತ್ತು ಎನ್ನಲಾಗಿದೆ. ಇದೇ ವಿಷಯವನ್ನು ಮುಂದಿಟ್ಟುಕೊಂಡು ನಡೆದ ಮಾತಿನ ಚಕಮಕಿ ಕ್ರಮೇಣ ಘರ್ಷಣೆಗೆ ತಿರುಗಿದ್ದು, ಕೋಪೋದ್ರಿಕ್ತನಾದ ಚಂದ್ರಪ್ಪ ತಮ್ಮನ ತಲೆಯ ಮೇಲೆ ಭೀಕರವಾಗಿ ಹಲ್ಲೆ ನಡೆಸಿದ್ದಾನೆ.

ತೀವ್ರ ಹಲ್ಲೆಯಿಂದ ಗಂಭೀರವಾಗಿ ಗಾಯಗೊಂಡ ನೀಲಪ್ಪ ಸ್ಥಳದಲ್ಲೇ ರಕ್ತಸ್ರಾವದಿಂದ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ. ಘಟನೆ ನಡೆದ ತಕ್ಷಣ ಸ್ಥಳದಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದ್ದು, ಸುದ್ದಿ ತಿಳಿದ ಮಾಯಕೊಂಡ ಠಾಣೆಯ ಪೊಲೀಸರು ತಕ್ಷಣವೇ ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಆರೋಪಿಯನ್ನು ವಶಕ್ಕೆ ಪಡೆದು ಮುಂದಿನ ತನಿಖೆ ಕೈಗೊಂಡಿದ್ದಾರೆ.

ಈ ನಡುವೆ, ಮೃತ ನೀಲಪ್ಪ ಅವರ ಕುಟುಂಬಸ್ಥರು ಕೊಲೆಗೆ ಕೇವಲ ಚಂದ್ರಪ್ಪ ಮಾತ್ರವಲ್ಲದೆ, ಅವರ ಕುಟುಂಬದ ಇತರ ಸದಸ್ಯರೂ ಸಹಕಾರ ನೀಡಿದ್ದಾರೆ ಎಂದು ಆರೋಪಿಸಿದ್ದಾರೆ. ಈ ಹಿನ್ನೆಲೆಯಲ್ಲಿ, ಪ್ರಕರಣದಲ್ಲಿ ಚಂದ್ರಪ್ಪನ ಕುಟುಂಬದ ಎಲ್ಲ ಸದಸ್ಯರನ್ನೂ ಆರೋಪಿಗಳನ್ನಾಗಿ ಮಾಡಬೇಕು ಎಂದು ಕುಟುಂಬಸ್ಥರು ಪಟ್ಟು ಹಿಡಿದಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಸಾಕ್ಷ್ಯ ಸಂಗ್ರಹ, ಸಾಕ್ಷಿಗಳ ವಿಚಾರಣೆ ಸೇ-ರಿದಂತೆ ಎಲ್ಲ ಆಯಾಮಗಳಿಂದ ತನಿಖೆ ಮುಂದುವ-ರಿಸಿದ್ದಾರೆ.

# ಪ್ರಗತಿಪರ ಸಂಘಟನೆಗಳು ಹಾಗೂ ರೈತ ಸಂಘದಿಂದ ಬೃಹತ್ ಪ್ರತಿಭಟನೆ



**ಕೃಷ್ಣರಾಜಪೇಟೆ:** ತಾಲೂಕಿನ ಕಂದಾಯ ಇಲಾಖೆಯ, ಭೂ ಮಂಜೂರಾತಿ ಶಾಖೆಯಲ್ಲಿ ಶಿರಸ್ತೆ ದಾರರಾಗಿ ಕಳೆದ ಮೂರು ತಿಂಗಳಿನಿಂದ ಕರ್ತವ್ಯ ನಿರ್ವಹಿಸುತ್ತಿದ್ದ ಅಸ್ಲಾಂ ಭಾಷಾ ಅವರನ್ನು ಏಕಾಏಕಿ ವರ್ಗಾಯಿಸಿ ಅವರ ಸ್ಥಾನಕ್ಕೆ ಬಂದಿರುವ ರೈತ ವಿರೋಧಿ ಭ್ರಷ್ಟ ಅಧಿಕಾರಿ ರವಿಯವರ ವರ್ಗಾವಣೆ ಆದೇಶವನ್ನು ವಿರೋಧಿಸಿ ಎಂದು ಪ್ರಗತಿಪರ ಸಂಘಟನೆಗಳು ಹಾಗೂ ರೈತ ಸಂಘದ ಕಾರ್ಯಕರ್ತರು ತಾಲೂಕು ಆಡಳಿತ ಕಾರ್ಯ ಸೌಧದ ಎದುರು ಬೃಹತ್ ಪ್ರತಿಭಟನೆ ನಡೆಸಿ, ತಮಟೆ ಚಳುವಳಿ ಮಾಡಿ ದಕ್ಷ ಅಧಿಕಾರಿಯ ವರ್ಗಾವ ಣೆಯನ್ನು ವಿರೋಧಿಸಿ ಆಕ್ರೋಶ ವ್ಯಕ್ತಪಡಿಸಿದರು,

ಸ್ಥಳಕ್ಕೆ ಭೇಟಿ ನೀಡಿದ ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ಅವರಿಗೆ ಮನವಿ ಸಲ್ಲಿಸಿದರು. ಈ ಹಿಂದೆ ಕೃಷ್ಣರಾಜಪೇಟೆ ತಾಲ್ಲೂಕು ಕಚೇರಿಯಲ್ಲಿ ರೆವಿನ್ಯೂ ಶೀರಸ್ತೆದಾರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ರವಿಯವರು 460ಕ್ಕೂ ಹೆಚ್ಚು ಕಡತಗಳನ್ನು ವಿಲೇವಾರಿ ಮಾಡದೆ ಲಂಚದ ಹಣಕ್ಕೆ ಒತ್ತಾಯಿಸಿ ಬಾಕಿ ಇಟ್ಟುಕೊಂಡಿದ್ದು ಕರ್ತವ ್ಯದಿಂದ ಪ್ರಭಾವ ಬೆಳೆಸಿ ಅಮಾನತ್ತು ಆದೇಶವನ್ನು ತೆರವು ಮಾಡಿಸಿಕೊಂಡು ಮತ್ತೆ ಕೃಷ್ಣರಾಜಪೇಟೆಗೆ ವರ್ಗಾವಣೆಯಾಗಿ ಬಂದಿದ್ದ ರವಿಯವರನ್ನು ರಾಜ್ಯ ಸರ್ಕಾರವು ಮತ್ತೆ ವರ್ಗಾವಣೆ ಮಾಡಿತ್ತು. ಕಳೆದ ಮೂರು ತಿಂಗಳ ಹಿಂದಷ್ಟೇ ಕೃಷ್ಣರಾಜಪೇಟೆಗೆ ರೆವಿನ್ಯೂ ಷರಿಸ್ತೆದರಾಗಿ ರವಿ ಅವರ ಸ್ಥಳಕ್ಕೆ ವರ್ಗಾವಣೆಗೊಂಡು ನಿಯತ್ತಿಯಾಗಿದ್ದ ಅಸ್ಲಾಂ ಭಾಷಾ ಅವರು ಶೀಘ್ರ ಕಡತಗಳ ವಿಲೇವಾರಿಗೆ ಕ್ರಮ ಕೈಗೊಂಡು, ರೈತ ಪರವಾಗಿ ಕೆಲಸ ಮಾಡಿ ಎಲ್ಲರ ಮೆಚ್ಚುಗೆಗೆ ಪಾತ್ರರಾಗಿದ್ದರು. ಆದರೆ ಮತ್ತೆ ತಾನು ಅಮಾನತ್ತುಗೊಂಡಿದ್ದ ಸ್ಥಳಕ್ಕೆ ರಾಜಕೀಯ ಬಂದಿರುವ ರವಿ ಅವರು ಕಡತಗಳನ್ನು ತಿದ್ದುಪಡಿ ಮಾಡಿ, ಲಂಚದ ಹಣ ನೀಡದ ರೈತರಿಗೆ ತೊಂದರೆ ನೀಡಿ ತಮ್ಮ ಅಧಿಕಾರವನ್ನು ದುರುಪಯೋಗ ಪಡಿಸಿಕೊಳ್ಳುವ ಸಾಧ್ಯತೆ ಇರುವುದರಿಂದ ಯಾವುದೇ ಕಾರಣಕ್ಕೂ ರವಿಯವರು ಕೆ. ಆರ್.ಪೇಟೆಯಲ್ಲಿ ಕೆಲಸ ಮಾಡಲು ನಾವು ಬಿಡುವುದಿಲ್ಲ ಕೂಡಲೇ ರಾಜ್ಯ ಸರ್ಕಾರವು ದಕ್ಷ ಅಧಿಕಾರಿ ಅಸ್ಲಾಂ ಭಾಷಾ ಅವರ ವರ್ಗಾವಣೆಯನ್ನು ರದ್ದು ಪಡಿಸಿ ಕೃಷ್ಣರಾಜಪೇಟೆಯಲ್ಲಿಯೇ ಕರ್ತವ್ಯ ನಿರ್ವಹಿಸಲು ಅವಕಾಶ ಮಾಡಿಕೊಡಬೇಕು ಇಲ್ಲದಿದ್ದರೆ ಉಗ್ರ ಹೋರಾಟ ನಡೆಸುವ ಜೊತೆಗೆ ರವಿಯವರನ್ನು ಹಿಂದಕ್ಕೆ ಕಳಿಸಲು ಗೋಬ್ಯಾಕ್ ಚಳುವಳಿ ನಡೆಸಬೇಕಾಗುತ್ತದೆ ಎಂದು ರೈತ ನಾಯಕ ಮುದುಗೆರೆ ರಾಜೇಗೌಡ ಜಿಲ್ಲಾಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಈ ಪ್ರತಿಭಟನೆಯಲ್ಲಿ ಪುರಸಭೆಯ ಹಿರಿಯ ಸದಸ್ಯ ಡಿ.ಪ್ರೇಮ್ ಕುಮಾರ್ ದಲಿತ ಸಂಘರ್ಷ ಸಮಿತಿಯ ತಾಲೂಕು ಸಂಚಾಲಕ ನಾಟನಹಳ್ಳಿ ಸೋಮರಾಜು ಜಲವಾದಿ ಮಹಾಸಭಾ ಜಿಲ್ಲಾಧ್ಯಕ್ಷ ಮಾಂಬಳ್ಳಿ ಜಯರಾಮ್, ರೈತ ಸಂಘದ ತಾಲೂಕು ಘಟಕದ ಅಧ್ಯಕ್ಷ ಪುಟ್ಟೇಗೌಡ ಮಾಜಿ ಅಧ್ಯಕ್ಷ ಮರುವನಹಳ್ಳಿ ಶಂಕರ್, ಬೂಕನಕೆರೆ ನಾಗರಾಜು, ದಲಿತ ಮುಖಂಡರಾದ ಮುದುಗೆರೆ ಮಹೇಂದ್ರ ಹ-ರಿಹರಪುರ ನರಸಿಂಹ, ನೀತೇಶ್ ಶರ್ಮಾ, ಜೈನಹಳ್ಳಿ ಹರೀಶ್, ನಾಟನಹಳ್ಳಿ ರಮೇಶ್, ಟಿ.ವೈ. ಆನಂದ್, ಅಗ್ರಹಾರ ಬಾಚಹಳ್ಳಿ ಜಗದೀಶ್, ಆಟೋ ಜಾವಿದ್, ಸೈಯದ್ ಜಮೀಲ್, ಅಜಮತುಲ್ಲಾ ಶರೀಫ್, ಸಲ್ಲೂ, ನವೀದ್ ಅಹಮದ್, ಮುರುಕನಹಳ್ಳಿ ಜಾವಿದ್ ಸೇರಿದಂತೆ ನೂರಾರು ಜನರು ಪ್ರತಿಭಟನೆ ಹಾಗೂ ಧರಣಿ ಸತ್ಯಾಗ್ರಹದಲ್ಲಿ ಭಾಗವಹಿಸಿದ್ದರು.

# ಮಾತೃಭೂಮಿ ವೃದ್ಧಾಶ್ರಮದಲ್ಲಿ ಸಿ.ಎನ್.ಅಶ್ವಥ್ ನಾರಾಯಣ್ ಹುಟ್ಟು ಹಬ್ಬದ ಆಚರಣೆ




**ಕೃಷ್ಣರಾಜಪೇಟೆ:** ಪಟ್ಟಣದ ಹೊರ ವಲಯದ ಸಾಧುಗೋನ ಹಳ್ಳಿಯಲ್ಲಿರುವ ಮಾತೃ ಭೂಮಿ ವೃದ್ಧಾಶ್ರಮದಲ್ಲಿ ರಾಜ್ಯದ ಮಾಜಿ ಉಪಮುಖ್ಯಮಂತ್ರಿ ಡಾ. ಅಶ್ವಥ್ ನಾರಾಯಣ ಅವರ ಹುಟ್ಟು ಹಬ್ಬದ ಅಂಗವಾಗ ಮಾತೃಭೂಮಿ ವೃದ್ಧಾಶ್ರಮ ದಲ್ಲಿ ಗಿಡಗಳನ್ನು ನೆಟ್ಟು ನೀರೆರೆದ ಭರತ್ ಕುಮಾರ್ ಅನಾಥ ವೃದ್ಧರೊಂದಿಗೆ ಕೇಕ್ ಕತ್ತರಿಸಿ, ಊಟವನ್ನು ಬಡಿಸುವ ಮೂಲಕ ಬಹಳ ಅರ್ಥಪೂರ್ಣವಾಗಿ ಆಚರಿಸಿದರು,

ರಾಜ್ಯದ ಸರಳ ಸಜ್ಜನ ರಾಜಕಾರಣಿಗಳಾಗಿ ಬೆಂಗಳೂರಿನ ಮಲ್ಲೇಶ್ವರಂ ವಿಧಾನಸಭಾ ಕ್ಷೇತ್ರದ ಸೋಲರಿಯದ ಶಾಸಕರಾಗಿ,ರಾಜ್ಯದ ಮಾಜಿ ಉಪ ಮುಖ್ಯಮಂತ್ರಿಗಳಾಗಿ ಇಡೀ ರಾಜ್ಯವೇ ಮೆಚ್ಚುವಂತೆ ದಕ್ಷ ಪ್ರಾಮಾಣಿಕ ಆಡಳಿತ ನೀಡಿದ ಅಶ್ವಥ್ ನಾರಾಯಣ್ ಅವರಿಗೆ ದಯಾಮಯನಾದ ಭಗವಂತನು ಒಳ್ಳೆಯ ಆರೋಗ್ಯ ಹಾಗೂ ಸಮೃದ್ಧಿಯನ್ನು ನೀಡಲಿ ಎಂದು ಪ್ರಾರ್ಥಿಸಿದರು.

ವಿಶ್ರಾಂತ ಪ್ರಾಂಶುಪಾಲರು ಹಾಗೂ ಶಿಕ್ಷಣ ತಜ್ಞರಾದ ಡಾ.ಕೆ. ಕಾಳೇಗೌಡ ಮಾತನಾಡಿ ಹುಟ್ಟುಹಬ್ಬದ ಹೆಸರಿನಲ್ಲಿ ಅನಗತ್ಯವಾಗಿ ಹಣವನ್ನು ಪೋಲು ಮಾಡಿ ಸಂಭ್ರಮಿಸುವ ಇಂದಿನ ಸಮಾಜದಲ್ಲಿ ಕರ್ನಾಟಕ ರಾಜ್ಯದ ಮಾಜಿ ಉಪ ಮುಖ್ಯಮಂತ್ರಿಗಳಾದ ಡಾಕ್ಟರ್ ಅಶ್ವಥ್ ನಾರಾಯಣ್ ಅವರ ಹುಟ್ಟುಹಬ್ಬವನ್ನು ವಯೋವೃದ್ಧರು ಹಾಗೂ ಅನಾಥರೊಂದಿಗೆ ಅತ್ಯಂತ ಸರಳವಾಗಿ ಹುಟ್ಟು ಹಬ್ಬವನ್ನು ಆಚ-ರಿಸಿಕೊಂಡು ವೃದ್ಧರ ಮೊಗದಲ್ಲಿ ನಗುವನ್ನು ಕಾಣಲು ಹೊರಟಿರುವ ಭರತ್ ಕುಮಾರ್ ಅವರಂತಹ ಯುವ ನಾಯಕರು ಇಂದಿನ ಸಮಾಜಕ್ಕೆ ಅಗತ್ಯವಾಗಿ ಬೇಕಾಗಿದ್ದಾರೆ. ಇಂದು ಹೋಳಿಗೆ ಊಟವನ್ನು ಮಾಡಿಸಿ ವಯೋವೃದ್ಧರೊಂದಿಗೆ ಸಹಪಂಕ್ತಿ ಭೋಜನ ಮಾಡಿದ ಭರತ್ ಕುಮಾರ್ ಅವರ ಹೃದಯ ಶ್ರೀಮಂತಿಕೆಯು ಅಪಾರವಾಗಿದ್ದು ನಾಗ-ರೀಕ ಸಮಾಜಕ್ಕೆ ಆದರ್ಶ ಪ್ರಾಯರಾಗಿದ್ದಾರೆ ಎಂದು ಅಭಿಮಾನದಿಂದ ಹೇಳಿದರು.

ಈ ಸಂದರ್ಭದಲ್ಲಿ ತಾಲೂಕು ಬಿಜೆಪಿ ಅಧ್ಯಕ್ಷ ಸಾರಂಗಿ ನಾಗಣ್ಣ, ಕೆ.ಆರ್.ಪೇಟೆ ಕೃಷ್ಣ ಪ್ರತಿಷ್ಠಾನದ ಖಜಾಂಚಿ ಹೆಮ್ಮನಹಳ್ಳಿ ರಮೇಶ್, ಬಿಜೆಪಿ ಎಸ್ಸಿ ಮೋರ್ಚ ರಾಜ್ಯ ಕಾರ್ಯಕಾರಣಿ ಸದಸ್ಯ ಮಹೇಶ್ ನಾಯಕ, ಅಕ್ಕಿ ಹೆಬ್ಬಾಳು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಆರ್.ವಾಸುರಾಜೇಗೌಡ, ನಿವೃತ್ತ ಶಿಕ್ಷಕರಾದ ಕರೀಗೌಡ, ವಿಶ್ರಾಂತ ಇಂಜಿನಿಯರ್ ಶಿವಲಿಂಗೇಗೌಡ ಸೇ-ರಿದಂತೆ ನೂರಾರು ಅಭಿಮಾನಿಗಳು ಹುಟ್ಟು ಹಬ್ಬದ ಸಂಭ್ರಮದಲ್ಲಿ ಭಾಗವಹಿಸಿದ್ದರು,

# ಕುಡಿದ ಮತ್ತಿನಲ್ಲಿ ಪತ್ನಿಯ ತಲೆ ಬೋಳಿಸಿದ ಪತಿ

**ಬಾಗಲಕೋಟೆ:** ಕುಡಿದ ಮತ್ತಿನಲ್ಲಿ ವ್ಯಕ್ತಿಯೊಬ್ಬ ತನ್ನ ಪತ್ನಿಯ ಮೇಲೆ ಅಮಾನುಷವಾಗಿ ವರ್ತಿಸಿ ತಲೆ ಬೋಳಿಸಿರುವ ಅಘಾತಕಾರಿ ಘಟನೆ ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲ್ಲೂಕು ವ್ಯಾಪ್ತಿಯ ತೊದಲಬಾಗಿ ಗ್ರಾಮದಲ್ಲಿ ನಡೆದಿದೆ. ಈ ಘಟನೆ ಸ್ಥಳೀಯರಲ್ಲಿ ತೀವ್ರ ಆಕ್ರೋಶ ಹಾಗೂ ಆತಂಕವನ್ನು ಮೂಡಿಸಿದೆ.

ಪತ್ನಿಯ ತಲೆ ಬೋಳಿಸಿದ ಆರೋಪಿಯನ್ನು ಉಮೇಶ್ ಕೊಟ್ಟಲಗಿ ಎಂದು ಗುರುತಿಸಲಾಗಿದ್ದು, ಪ್ರಕರಣ ದಾಖಲಿಸಿಕೊಂಡ ಸಾವಳಗಿ ಪೊಲೀಸ್ ಠಾಣೆ ಪೊಲೀಸರು ಆರೋಪಿಯನ್ನು ಬಂಧಿಸಿ ಮುಂದಿನ ತನಿಖೆ ಕೈಗೊಂಡಿದ್ದಾರೆ. ಪ್ರಾಥಮಿಕ ಮಾಹಿತಿಯಂತೆ, ಆರೋಪಿ ಮದ್ಯದ ಅಮಲಿನಲ್ಲಿ ಪತ್ನಿಯ ನಡತೆಯ ಕು-ರಿತು ಅನುಮಾನ ವ್ಯಕ್ತಪಡಿಸಿ, ಪದೇಪದೇ ಜಗಳಕ್ಕೆ ಕಾರಣನಾಗುತ್ತಿದ್ದನು ಎನ್ನಲಾಗಿದೆ.



ಘಟನೆಯ ದಿನವೂ ಕುಡಿದ ಮತ್ತಿನಲ್ಲಿ ಪತ್ನಿಯನ್ನು ಬೆದರಿಸಲು ಕಬ್ಬು ಕಡಿಯುವ ಕೊಯ್ತಾವನ್ನು ತೋರಿಸಿ ಭೀತಿಗೊಳಿಸಿದ್ದಾನೆ. ಬಳಿಕ ಪತ್ನಿಯ ಮಾನಸಿಕ ಹಾಗೂ ದೈಹಿಕ ಪೀಡನೆ ಮುಂದುವರೆಸಿ, ಸಾರ್ವಜನಿಕವಾಗಿ ಅವಮಾನಗೊಳಿಸುವ ಉದ್ದೇಶದಿಂದ ತಲೆ ಬೋಳಿಸಿ ವಿಕೃತಿ ಮೆರೆದಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಅಮಾನವೀಯ ಕೃತ್ಯದಿಂದ ಪೀಡಿತ ಮಹಿಳೆ ತೀವ್ರ ಮಾನಸಿಕ ಆಘಾತಕ್ಕೊಳಗಾಗಿದ್ದು, ವೈದ್ಯಕೀಯ ಹಾಗೂ ಕಾನೂನು ನೆರವು ಒದಗಿಸಲಾಗಿದೆ.

ಘಟನೆಯ ಮಾಹಿತಿ ದೊರಕುತ್ತಿದ್ದಂತೆ ಪೊಲೀಸರು ತಕ್ಷಣ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಆರೋಪಿಯನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿದ್ದಾರೆ. ಮಹಿಳೆಯರ ಮೇಲೆ ನಡೆಯುವ ಹಿಂಸೆ ಮತ್ತು ದೌರ್ಜನ್ಯಗಳನ್ನು ಯಾವುದೇ ಕಾರಣ-ಕ್ಕೂ ಸಹಿಸಬಾರದು ಎಂದು ಪೊಲೀಸರು ಸ್ಪಷ್ಟಪಡಿಸಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ಅಗತ್ಯ ಸಾಕ್ಷ್ಯ ಸಂಗ್ರಹಿಸಿ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ಸುದ್ದಿ ಹಾಗೂ ಜಾಹೀರಾತುಗಾಳಿಗಾಗಿ ಸಂಪರ್ಕಿಸಿ
9538786812\8217606793

# "ನಮಗೆ ಬೇರೆ ಒಂದು ಇಂಚು ಜಾಗ ಇಲ್ಲ": ಲಂಬಾಣಿ ಸಮುದಾಯದ ನೋವಿನ ಧ್ವನಿ



**ದೊಡ್ಡಬಳ್ಳಾಪುರ:**ದಲಿತ ನಾಯಕ ರಾದವರೇ ಇಂದು ನಮಗೆ (ಲಂಬಾಣಿ ಜನಕ್ಕೆ) ಅನ್ಯಾಯ ಮಾಡಲು ಹೊರಟಿದ್ದಾರೆ. ನಮ್ಮ ಅಭಿವೃದ್ಧಿಗಾಗಿ ನಾವು ಆಯ್ಕೆ ಮಾಡಿ ಕಳಿಸಿದವರೇ ನಮ್ಮ ಹೊಟ್ಟೆ ಮೇಲೆ ಹೊಡೆಯಲು ಪ್ಲಾನ್ ಮಾಡಿದ್ದಾರೆ. ಒಂದು ಜನಾಂಗದವರನ್ನು ಮೆಚ್ಚಿಸಲು ಮತ್ತೊಂದು ಜನಾಂಗದವರನ್ನು ಸಮಾಧಿ ಮಾಡಲು ಹೊರಟಿದ್ದಾರೆ ಎಂದು ದೊಡ್ಡಬಳ್ಳಾಪುರ ತಾಲೂಕಿನ ಗೊಲ್ಲಹಳ್ಳಿಯ ಶಿವಲಿಂಗಪುರ ಜನ ಆರೋಪಿಸಿ ಆಕ್ರೋಶ ವ್ಯಕ್ತಪಡಿಸಿದ್ದಾರೆ....

ದೊಡ್ಡಬಳ್ಳಾಪುರ ತಾಲೂಕಿನ ಗೊಲ್ಲಹಳ್ಳಿಯ ಶಿವಲಿಂಗಪುರದಲ್ಲಿ ಬಚ್ಚಹಳ್ಳಿ ಗ್ರಾಮದ ಸರ್ವೆ ನಂಬರ್ 10 ರಲ್ಲಿ ಸುಮಾರು 50-60 ವರ್ಷಗಳಿಂದ ಸ್ವಾಧೀನದಲ್ಲಿದ್ದೇವೆ. ಇದೀಗ ನಮ್ಮಿಂದ ಈ ಸರ್ಕಾರಿ ಗೋಮಾಳ ಕೂಡಲೇ ತೆರವು ಮಾಡಬೇಕು ಎಂದು ಕಂದಾಯ ಇಲಾಖಾ ಅಧಿಕಾರಿಗಳು ಹೇಳುತ್ತಿದ್ದಾರೆ. ದಲಿತರ ಬೊಗಸೆಯಷ್ಟು ಜಾಗ ಕಿತ್ತುಕೊಂಡು ಬದುಕು ನಾಶ ಮಾಡಲು ಹೊರಟಿದ್ದಾರೆ. ನಾವು ಹತ್ತಾರು ಎಕರೆ ಜಗದಲ್ಲಿ ಇಲ್ಲ. ಒಂದು ಗುಂಟೆ ಎರಡು ಗುಂಟೆ ಜಾಗದಲ್ಲಿ ಹಸುಗಳನ್ನು ಕಟ್ಟಿಕೊಂಡು ಅವುಗಳಿಗೆ ಹುಲ್ಲಿನ ಬಣವೆ ಹಾಕಿಕೊಂಡು, ತಿಪ್ಪೆ ಮಾಡಿಕೊಂಡಿದ್ದೇವೆ, ಇದೇ ಜಾಗದಲ್ಲಿ ಸುಮಾರು ವರ್ಷಗಳಿಂದ ವಾಸ ಕೂಡ ಮಾಡ್ತಿದ್ದೇವೆ. ಅಧಿಕಾರಿಗಳು ಈಗ ಈ ಜಾಗವನ್ನು ನಮ್ಮಿಂದ ಕಿತ್ತುಕೊಳ್ಳುವ ನಿರ್ಧಾರ ಮಾಡಿದ್ದಾರೆ. ನಮಗೆ ಈ ಜಾಗ ಬಿಟ್ಟರೆ ಬೇರೆಲ್ಲೂ ಒಂದು ಇಂಚು ಜಾಗ ಇಲ್ಲ ಎಂದು ಹೇಳಿದ್ದಾರೆ..

ಒಂದು ಕಣ್ಣಿಗೆ ಬೆಣ್ಣೆ ಮತ್ತೊಂದು ಕಣ್ಣಿಗೆ ಸುಣ್ಣ ಮೆತ್ತುತ್ತಿದ್ದಾರೆ. ಈ ರೀತಿ ಅನ್ಯಾಯ ಮಾಡಬಾರದು. ಒಂದು ಸಮುದಾಯದವರನ್ನು ಸಮಾಧಿ ಮಾಡಿ ಆ ಸಮಾಧಿ ಮೇಲೆ ಬೇರೊಂದು ಸಮುದಾಯದ ಭವನ ನಿರ್ಮಿಸೋದು ಎಷ್ಟು ಸರಿ. ಉಳ್ಳವರಿಗೆ ಒಂದು ನ್ಯಾಯ ಇಲ್ಲದವರಿಗೆ ಇನ್ನೊಂದು ನ್ಯಾಯ. ಉಳ್ಳವರು ಲಕ್ಷ ಲಕ್ಷ ಹಣ ಕೊಟ್ಟು ಜಮೀನುಗಳನ್ನು ಉಳಿಸಿಕೊಳ್ಳುತ್ತಾರೆ. ಅಧಿಕಾರಿಗಳಿಗೆ ಅಂತವರಿಗೆ ಏನು ಬೇಕಾದರೂ ಮಾಡಿ ಕೊಡುತ್ತಾರೆ. ನಾವು ಎಲ್ಲಿಂದ ಹಣ ತರೋದು, ಕೂಲಿ ಮಾಡೋದು ಜೀವನ ಸಾಗಿಸಲು ಸಾಸಲ್ಲ. ಹೊಟ್ಟೆ ಬಟ್ಟೆ ಕಟ್ಟಿ ನಾಲ್ಕು ಕಾಸು ಉಳಿಸಿ ಇಷ್ಟು ಮನೆ ಕಟ್ಟಿಕೊಂಡು, ಒಂದೆರಡು ಹಸು ಸಾಕಿಕೊಂಡು ಕೂಲಿ ನಾಲಿ ಮಾಡುತ್ತಾ ಬದುಕು ಸಾಗಿಸುತ್ತಿದ್ದೇವೆ ಎಂದು ತಿಳಿಸಿದ್ದಾರೆ.

ಹಣ, ಅಧಿಕಾರ ಇರುವವರ ಜಮೀನುಗಳನ್ನು ಬಿಟ್ಟು ನಮ್ಮಂಥ ತಲೆ ಮೇಲೆ ಬಟ್ಟೆ ಇಲ್ಲದವರ ಜಮೀನುಗಳನ್ನು ಬಲವಂತವಾಗಿ ಕಿತ್ತುಕೊಳ್ಳುತ್ತಿದ್ದಾರೆ. ಈ ಜಮೀನು ಕಿತ್ತುಕೊಂಡರೆ ನಾವು ಖಂಡಿತ ಬದುಕುವುದಿಲ್ಲ. ಅಧಿಕಾರಿಗಳ ಮುಂದೆಯೇ ಪ್ರಾಣ ಕಳೆದುಕೊಳ್ಳುತ್ತೇವೆ. ನಮ್ಮ ಬದುಕೇ ಕಿತ್ತುಕೊಂಡಮೇಲೆ ನಾವು ಏಕೆ ಬದುಕಿರಬೇಕು. ಈ ಜಾಗ ಹೊರತುಪಡಿಸಿ ಬೇರೆ ಕಡೆ ಸಾಕಷ್ಟು ಜಮೀನು ಇವೆ. ಅಲ್ಲೆಲ್ಲ ಬಿಟ್ಟು ಪರಿಶಿಷ್ಟ ಜಾತಿಯ ಲಂಬಾಣಿ ಸಮುದಾಯಕ್ಕೆ ಸೇರಿರುವ ನಮ್ಮ ಜಮೀನು ಮೇಲೆ ಕಣ್ಣು ಹಾಕಿದ್ದಾರೆ. ಹಣ ಇರುವವರು ಲಕ್ಷ ಲಕ್ಷ ಕೊಟ್ಟು 2 ಎಕರೆ, 5 ಎಕರೆ, 10 ಎಕರೆ ಜಮೀನು ಮಾಡಿಕೊಳ್ಳುತ್ತಾರೆ. ನಮ್ಮ ಅತ್ರ ಹಣ ಇಲ್ಲ ಕೂಲಿ ಮಾಡಿ ಜೀವನ ಮಾಡೋರು ನಾವೆಲ್ಲಿ ಹಣ ಕೊಟ್ಟು ಜಮೀನು ಮಾಡಿಕೊಳ್ಳಲು ಆಗುತ್ತೆ ಎಂದು ಪ್ರಶ್ನೆ ಮಾಡಿದ್ದಾರೆ.

ನಾವು ಗುಡಿಸಲಿನಲ್ಲಿ ವಾಸ ಮಾಡಿಕೊಂಡು ಬಂದವರು. 2-3 ಬಾರಿ ಗುಡಿಸಲಿಗೆ ಬೆಂಕಿ ಕೂಡ ಬಿದ್ದಿತ್ತು. ನಾವು ತಾಲ್ಲೂಕು ಕಚೇರಿಯಿಂದ ಪಡೆದಿದ್ದ ಸಾಗುವಳಿ ಚೀಟಿ ದಾಖಲೆಗಳು ಸುಟ್ಟುಹೋಗಿವೆ. ನಾವು ಓದು ಬರಹ ಕಲಿತವರಲ್ಲ. ನಮಗೆ ಏನು ಮಾಡಬೇಕೆಂದು ತಿಳಿದಿಲ್ಲ. ಈಗ ನೋಡಿದ್ರೆ ನಮಗೆ ತಿಳಿಸದೇ ಬೇರೆಯವರಿಗೆ ನೀಡಲು ಹೊರಟಿದ್ದಾರೆ. ಈ ಜಮೀನು ಕಿತ್ತುಕೊಂಡರೆ ನಾವೆಲ್ಲಿ ಹೋಗಬೇಕು? ಒಬ್ಬೊಬ್ಬರಿಗೆ 3 ಜನ, 6 ಜನ ಮಕ್ಕಳಿದ್ದಾರೆ. 100 ಕುಟುಂಬ ಇವೆ ಅವರು ಹೇಗೆ ಬದುಕುತ್ತಾರೆ. ಇಲ್ಲಿ ಬಿಟ್ಟು ಕಾಡಿಗೆ ಹೋಗೋಣ ಅಂದ್ರೆ ಅಲ್ಲೂ ಅವಕಾಶ ಇಲ್ಲ. ಇಲ್ಲಿನ ಶಾಸಕರು ಪ್ರಭಾವ ಬಳಸಿ ಲಂಬಾಣಿ ಜನಾಂಗದ ಜಾಗವನ್ನು ಕಿತ್ತುಕೊಂಡು ಬೇರೊಂದು ಜನಾಂಗಕ್ಕೆ ಕೊಡಲು ಹೊರಟಿದ್ದಾರೆ ಎಂದು ಕಿಡಿಕಾರಿದ್ದಾರೆ...

ಈಗೇನಾದರೂ ನಮ್ಮ ಜಮೀನುಗಳನ್ನು ಬಲವಂತವಾಗಿ ಕಿತ್ತುಕೊಂಡರೆ ನಾವು ಪ್ರಾಣ ಬಿಡುತ್ತೇವೆ ಹೊರೆತು ಜಾಗ ಬಿಡಲ್ಲ. ಚುನಾವಣೆ ಬಹಿಷ್ಕಾಂರ ಹಾಕ್ತೇವೆ, ರಸ್ತೆ ತಡೆದು ಪ್ರತಿಭಟನೆ ಮಾಡ್ತೀವಿ. ನಮಗೆ ನ್ಯಾಯ ಕೊಡಿ ನಮ್ಮ ಜಮೀನು ನಮಗೆ ಉಳಿಸಿ ಕೊಡಿ ನಿಮಗೆ ಕೈ ಮುಗಿದು ಕೇಳಿಕೊಳ್ಳುವುದರ ಜೊತೆಗೆ ಎಚ್ಚರಿಕೆ ನೀಡಿದ್ದಾರೆ.

# 15 ವರ್ಷದ ಬಾಲಕನಿಗೆ ಮದ್ಯ ಕುಡಿಸಿದ ಕಂಪನಿ

**ಬೆಂಗಳೂರು:** ನಗರದಲ್ಲಿ ಅಪ್ರಾಪ್ತ ಬಾಲಕರಿಗೆ ಮದ್ಯಪಾನ ಮಾಡಿಸಿದ ಗಂಭೀರ ಹಾಗೂ ಆತಂಕಕಾರಿ ಪ್ರಕರಣ ಬೆಳಕಿಗೆ ಬಂದಿದ್ದು, ಈ ಘಟನೆಯಲ್ಲಿ ಅಪ್ರಾಪ್ತನೊಬ್ಬ ತನ್ನ ಅಪಾರ್ಟ್‌ಮೆಂಟ್‌ನ 7ನೇ ಮಹಡಿಯಿಂದ ಉರುಳಿ ಬಿದ್ದು ಮೃತಪಟ್ಟಿರುವುದು ಸಾರ್ವಜನಿಕರಲ್ಲಿ ಭಾರೀ ಚರ್ಚೆಗೆ ಕಾರಣವಾಗಿದೆ. ಈ ದುರ್ಘಟನೆ ಬೆಂಗಳೂರು ನಗರದಲ್ಲಿ ನಡೆದಿದ್ದು, ಮೃತ ಬಾಲಕನ ಪೋಷಕರು ಈ ಕುರಿತು ರಾಜರಾಜೇಶ್ವ-ರಿನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಜನವರಿ ತಿಂಗಳಲ್ಲೇ ದೂರು ದಾಖಲಿಸಿದ್ದರು. ದೂರಿನ ಆದ-ಾರದ ಮೇಲೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರೆಸಿದ್ದಾರೆ.

**ಜೆಜೆ ಆಕ್ಟ್ ಮತ್ತು ಮದ್ಯ ಕಾಯ್ದೆ ಅಡಿ ಪ್ರಕರಣ:**ಪೊಲೀಸ್ ಮಾಹಿ ತಿಯಂತೆ, ಜನವರಿ 31ರಂದು ರಾತ್ರಿ ಸುಮಾರು 9 ಗಂಟೆ 40 ನಿಮಿಷಕ್ಕೆ ಈ ದುರ್ಘಟನೆ ನಡೆದಿದೆ. ಡಾ. ವಿಷ್ಣುವರ್ಧನ್ ರಸ್ತೆಯಲ್ಲಿರುವ ಅಪಾರ್ಟ್‌ಮೆಂಟ್‌ನ ನಿವಾಸಿಯಾಗಿರುವ ಮೃತ ಬಾಲಕನ ಪೋಷಕರು ಅದೇ ದಿನ ತಕ್ಷಣವೇ ಪೊಲೀಸರಿಗೆ ದೂರು ನೀಡಿದ್ದಾರೆ. ದೂರಿನ ಪ್ರಕಾರ, ಅವರ 15 ವರ್ಷದ ಮಗ ಅಪಾರ್ಟ್‌ಮೆಂಟ್‌ನ ಏಳನೇ ಮಹಡಿ ಯಿಂದ ಕೆಳಗೆ ಬಿದ್ದು ಮೃತಪಟ್ಟಿದ್ದಾನೆ.

ದೂರು ದಾಖಲಿಸಿಕೊಂಡ ಬಳಿಕ ಪೊಲೀಸರು ಪ್ರಕರಣವನ್ನು ಗಂಭೀರವಾಗಿ ಕೈಗೆತ್ತಿಕೊಂಡು, ಹಲವು ಕೋನಗಳಿಂದ ತನಿಖೆ ಆರಂಭಿಸಿದ್ದಾರೆ. ತನಿಖೆ ವೇಳೆ ಬೆಳಕಿಗೆ ಬಂದ ಸತ್ಯಾಂಶಗಳು ಮತ್ತಷ್ಟು ಆಘಾತಕಾರಿಯಾಗಿದ್ದು, ಮೃತ ಬಾಲಕನಿಗೆ ಒಂದು ಸ್ಥಳೀಯ ಸಂಸ್ಥೆಯು ಸಿರಗೇಟ್ ಮತ್ತು ಮದ್ಯಪಾನ ಮಾಡಿಸಿದ್ದೆಂದು ತಿಳಿದುಬಂದಿದೆ. ಅಪ್ರಾಪ್ತನಿಗೆ ಮದ್ಯಪಾನ ಮಾಡಿಸಿರುವುದು ಕಾನೂನಿನ ಗಂಭೀರ ಉಲ್ಲಂಘನೆಯಾಗಿದ್ದು, ಈ ಅಂಶ ಪ್ರಕರಣ-ಕ್ಕೆ ಹೊಸ ತಿರುವು ನೀಡಿದೆ.

**ಸಂಸ್ಥೆಯ ಮಾಲೀಕರು ಮತ್ತು ಸಿಬ್ಬಂದಿ ವಿರುದ್ಧ ಕ್ರಮ:**ಮೃತ ಬಾಲಕ ಮತ್ತು ಅವನ ಸ್ನೇಹಿತರು ಸ್ಥಳೀಯ ಕಂಪನಿ ಯೊಂದರ ಆವರಣದಲ್ಲಿ ಇದ್ದಾಗ ಈ ಕೃತ್ಯ ನಡೆದಿದ್ದು, ಸಂಸ್ಥೆಯವರು ಅಪ್ರಾಪ್ತರಿಗೆ ಮದ್ಯ ಕುಡಿಸಿದ್ದಾರೆಯೆಂಬ ಆರೋಪದ ಹಿನ್ನೆಲೆಯಲ್ಲಿ, ಕಂಪನಿಯ ಮಾಲೀಕರು ಹಾಗೂ ಸಿಬ್ಬಂದಿ ವಿರುದ್ಧ ಮಕ್ಕಳ ಆರೈಕೆ ಮತ್ತು ರಕ್ಷಣೆ ಕಾಯ್ದೆ ಮತ್ತು ಕರ್ನಾಟಕ ಮದ್ಯ ಕಾಯ್ದೆಯಡಿ ಪ್ರಕರಣ ದಾಖಲಿಸಲಾಗಿದೆ. ಈ ಕುರಿತು ತನ್ನ ಎಕ್ಸ್ (ಹಳೆಯ ಟ್ವಿಟರ್) ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿದೆ.

**ಸಾರ್ವಜನಿಕರಿಗೆ ಖಾಕಿ ಎಚ್ಚರಿಕೆ:** ಪ್ರಕರಣದ ಎಲ್ಲ ಆಯಾಮ ಗಳನ್ನು ಪೊಲೀಸರು ಸೂಕ್ಷ್ಮವಾಗಿ ಪರಿಶೀಲಿ ಸುತ್ತಿದ್ದು, ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲು ಮುಂದಾಗಿದ್ದಾರೆ. ಜೊತೆಗೆ, ಅಪ್ರಾಪ್ತರಿಗೆ ಮದ್ಯಪಾನ ಮಾಡಿಸುವಂತಹ ಕೃತ್ಯಗಳು ಸಮಾಜಕ್ಕೆ ಅತ್ಯಂತ ಅಪಾಯಕಾರಿ ಎಂಬುದನ್ನು ಸ್ಪಷ್ಟಪಡಿಸಿರುವ ಪೊಲೀಸರು, ಇಂತಹ ಘಟನೆಗಳು ಮರುಕಳಿಸದಂತೆ ಸಾರ್ವಜನಿಕರಿಗೆ ಎಚ್ಚ-ರಿಕೆ ನೀಡಿದ್ದಾರೆ. ಪೋಷಕರು, ಸಂಸ್ಥೆಗಳು ಹಾಗೂ ಸಾರ್ವಜನಿಕರು ಕಾನೂನು ಮಿತಿಗಳನ್ನು ಗೌರವಿಸಿ ಮಕ್ಕಳ ಭದ್ರತೆ ಮತ್ತು ಭವಿಷ್ಯದ ಬಗ್ಗೆ ಹೆಚ್ಚಿನ ಜಾಗ್ರತೆ ವಹಿಸಬೇಕೆಂದು ಖಾಕಿ ಪಡೆ ಮನವಿ ಮಾಡಿದೆ.

# ಭಾರತೀಯ ಚಿತ್ರರಂಗದ ಬಹು ನಿರೀಕ್ಷಿತ ಚಿತ್ರಗಳ ಪಟ್ಟಿಯಲ್ಲಿ ಯಶ್ ನಟನೆಯ ಟಾಕ್ಸಿಕ್ ನಂಬರ್.01

ಭಾರತೀಯ ಸಿನಿಮಾರಂಗದಲ್ಲಿ ಸಂಚಲನ ಮೂಡಿಸಿದ ನಟ ಎಂದರೆ ಯಶ್ ಎಂಬುದು ಅತಿಶಯೋಕ್ತಿಯಲ್ಲ. ಕನ್ನಡ ಚಿತ್ರರಂಗದಿಂದ ಹೊರಬಂದು ಪ್ಯಾನ್ ಇಂಡಿಯಾ ಮಟ್ಟದಲ್ಲಿ ಅಭೂತಪೂರ್ವ ಯಶಸ್ಸು ಸಾಧಿಸಿದ ಕೆಜಿಎಫ್ ಚಿತ್ರದ ಮೂಲಕ ಯಶ್, ಇಡೀ ಭಾರತದಷ್ಟೇ ಅಲ್ಲದೆ ಜಾಗತಿಕ ಮಟ್ಟದಲ್ಲಿಯೂ ಕನ್ನಡ ಸಿನಿಮಾರಂಗದತ್ತ ಗಮನ ಸೆಳೆಯುವಂತೆ ಮಾಡಿದ್ದಾರೆ. ವಿಶೇಷವಾಗಿ ಕೆಜಿಎಫ್ ಚಾಪ್ಟರ್ 2 ಬಿಡುಗಡೆಯಾದ ನಂತರ, ಯಶ್ ಮುಂದಿನ ಚಿತ್ರ ಯಾವುದು ಎಂಬ ಕುತೂಹಲ ಅಭಿಮಾನಿಗಳು ಹಾಗೂ ಸಿನಿಪ್ರೇಕ್ಷಕರಲ್ಲಿ ತೀವ್ರವಾಗಿತ್ತು.




ಈಕುತೂಹಲಕ್ಕೆ ಉತ್ತರವಾಗಿ ಯಶ್ ಘೋಷಿಸಿದ ಸಿನಿಮಾ ಎಂದರೆ ಟಾಕ್ಸಿಕ್. ಈ ಚಿತ್ರ ಘೋಷಣೆಯಾದ ಕ್ಷಣದಿಂದಲೇ ದೇಶದಾದ್ಯಂತ ಭಾರೀ ಚರ್ಚೆಗೆ ಗ್ರಾಸವಾಗಿದ್ದು, ಯಶ್ ಯಾವ ರೀತಿಯ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ ಎಂಬುದರ ಬಗ್ಗೆ ಭಾರೀ ನಿರೀಕ್ಷೆ ಹುಟ್ಟಿಕೊಂಡಿದೆ. ಇಡೀ ಭಾರತವೇ ಈ ಚಿತ್ರ ಬಿಡುಗಡೆಗೆ ಕಾತರದಿಂದ ಕಾಯುತ್ತಿರುವುದು ವಿಶೇಷ.

ಮಾರ್ಚ್ 19ರಂದು ತೆರೆ ಮೇಲೆ ಅಪ್ಪಳಿಸಲು ಸಜ್ಜಾಗಿರುವ ಈ ಚಿತ್ರವನ್ನು ಖ್ಯಾತ ನಿರ್ದೇಶಕಿ ಗೀತು ಮೋಹನ್ ದಾಸ್ ಅವರು ನಿರ್ದೇಶಿಸುತ್ತಿದ್ದಾರೆ. ವಿಭಿನ್ನ ಶೈಲಿ ಮತ್ತು ಗಂಭೀರ ಕಥಾವಸ್ತುಗಳಿಗೆ ಹೆಸರಾದ ಗೀತು ಮೋಹನ್ ದಾಸ್ ಅವರ ನಿರ್ದೇಶನದಲ್ಲಿ ಯಶ್ ಕಾಣಿಸಿಕೊಳ್ಳುತ್ತಿರುವುದು ಈ ಚಿತ್ರದ ಮೇಲಿನ ನಿರೀಕ್ಷೆಯನ್ನು ಮತ್ತಷ್ಟು ಹೆಚ್ಚಿಸಿದೆ.

ಇದೀಗ 'ಟಾಕ್ಸಿಕ್' ಸಿನಿಮಾ ಮತ್ತೊಂದು ಮಹತ್ವದ ದಾಖಲೆಗೂ ಕಾರಣವಾಗಿದೆ. ಜಾಗತಿಕ ಮಟ್ಟದಲ್ಲಿ ಸಿನಿಮಾ ಪ್ರೇಕ್ಷಕರ ವಿಶ್ವಾಸಾರ್ಹ ವೇದಿಕೆಯಾಗಿರುವ ಬಿಡುಗಡೆ ಯಾಗಲಿರುವ ಬಹು ನಿರೀಕ್ಷಿತ ಸಿನಿಮಾಗಳು ಮತ್ತು ಶೋಗಳ ಪಟ್ಟಿಯಲ್ಲಿ ಈ ಚಿತ್ರ ಬರೋಬ್ಬರಿ 28.6% ಮತಗಳೊಂದಿಗೆ ಪ್ರಥಮ ಸ್ಥಾನ ಪಡೆದಿದೆ. ಇದು ಯಶ್ ಅವರ ಸ್ಟಾರ್ ಪವರ್ ಹಾಗೂ ಚಿತ್ರದ ಮೇಲೆ ಜನರು ಇಟ್ಟಿರುವ ಭಾರೀ ನಿರೀಕ್ಷೆಗೆ ಸ್ಪಷ್ಟ ಸಾಕ್ಷಿಯಾಗಿದೆ.ಒಟ್ಟಿನಲ್ಲಿ, 'ಟಾಕ್ಸಿಕ್' ಸಿನಿಮಾ ಯಶ್ ಅವರ ವೃತ್ತಿಜೀವನದ ಮತ್ತೊಂದು ಮಹತ್ವದ ಹಂತವಾಗುವ ಲಕ್ಷಣಗಳು ಸ್ಪಷ್ಟವಾಗಿದ್ದು, ಕನ್ನಡ ಮಾತ್ರವಲ್ಲದೆ ಭಾರತೀಯ ಸಿನಿಮಾರಂಗದಲ್ಲಿ ಹೊಸ ದಾಖಲೆ ಬರೆಯುವ ನಿರೀಕ್ಷೆ ಈಗಲೇ ಜೋರಾಗಿದೆ.

# ಜನಪರ ಸಂವೇದನೆಯ ಕವಯಿತ್ರಿ ಬಿ.ಎಂ. ಪ್ರಮೀಳ ಮಹದೇವ್: ಹಿರಿಯ ಚಿತ್ರನಟ ರಾಮಕೃಷ್ಣ



**ಪೀಣ್ಯ ದಾಸರಹಳ್ಳಿ:**'ಕನ್ನಡ ಚಲನಚಿತ್ರಕ್ಕೂ, ಸಾಹಿತ್ಯ ಕ್ಷೇತ್ರಕ್ಕೂ ಅವಿನಾಭಾವ ಸಂಬಂಧವಿದೆ.ಅತ್ಯಂತ ಯಶಸ್ವಿ ಚಿತ್ರಗಳು ಗಲ್ಲಾಪೆಟ್ಟಿಗೆಯಲ್ಲಿ ಗೆದ್ದಿದ್ದು ಅತ್ಯಂತ ಒಳ್ಳೆಯ ಕಾದಂಬರಿಗಳಿಂದ. ಹಾಗಾಗಿ ಚಲನಚಿತ್ರರಂಗದ ಶ್ರೇಯೋಭಿವೃದ್ಧಿಗೆ ಕನ್ನಡ ಸಾಹಿತ್ಯ ಕ್ಷೇತ್ರದ ಕಾಣಿಕೆ ಅಪೂರ್ವವಾಗಿದೆ'ಎಂದು ಕನ್ನಡ ಚಲನಚಿತ್ರರಂಗದ ಹಿರಿಯ ನಟ ರಾಮಕೃಷ್ಣ ಅಭಿಪ್ರಾಯ ಪಟ್ಟರು.

ಚಿಕ್ಕಬಳ್ಳಾಪುರದ ಒಕ್ಕಲಿಗರ ಕಲ್ಯಾಣ ಮಂಟಪದಲ್ಲಿ ಕವಯಿತ್ರಿ ಬಿ.ಎಂ. ಪ್ರಮೀಳಾ ಅವರ ' ಸಾಲು ದೀಪಗಳು' ಎಂಬ ಕವನ ಸಂಕಲನ ಬಿಡುಗಡೆ ಮಾಡಿ ಮಾತನಾಡಿದರು.

'ಇಂದಿನ ಕನ್ನಡ ಚಲನಚಿತ್ರರಂಗದ ದಿಕ್ಕು ಬದಲಾಗಿದೆ.ಒಳ್ಳೆಯ ಸಾಹಿತ್ಯವನ್ನು ಎಲ್ಲಿಯವರೆಗೆ ಚಲನಚಿತ್ರ ರಂಗ ಸ್ವೀಕ-ರಿಸುವುದಿಲ್ಲವೋ - ಅಲ್ಲಿಯವರೆಗೂ ಜಗತ್ತಿಗೆ ಒಳ್ಳೆಯ ಸಂದೇಶವನ್ನು ಕೊಡಲು ಸಾಧ್ಯವಾಗುವುದಿಲ್ಲ' ಎಂದು ಹಿರಿಯ ಚಿತ್ರನಟ ರಾಮಕೃಷ್ಣ ಎಂದು ಮರುಗಿದರು.

ಚಿಕ್ಕಬಳ್ಳಾಪುರ ಆದಿಚುಂಚನಗಿರಿ ಶಾಖಾಮಠದ ಶ್ರೀ ಮಂಗಳನಾಥ ಸ್ವಾಮೀಜಿಯವರು ಮಾತನಾಡಿ,' ಸಾಲುದೀಪಗಳು ಕವಯಿತ್ರಿ ಬಿ.ಎಂ. ಪ್ರಮೀಳಾ ಮಹದೇವ್ ಅವರು ತಮ್ಮ ತಮ್ಮ ಅಂತರಂಗದಲ್ಲಿ ಸೂಸುವ ಶುದ್ಧ ಸಾಮಾಜಿಕ ಕಳಕಳಿಯನ್ನು,ಕಾಳಜಿಯನ್ನು ತಮ್ಮ ಹನಿಗವನಗಳಲ್ಲಿ ಬಿತ್ತಿದ್ದಾರೆ. ಸಮಾಜ-ಕ್ಕೆ ಒಳ್ಳೆಯ ಸಂದೇಶಗಳನ್ನು ನೀಡುವ ಮೂಲಕ ಸಾಲು ದೀಪಗಳನ್ನು ಹಚ್ಚುತ್ತಿದ್ದಾರೆ'ಎಂದರು.

ಕವಿಗಳೂ, ಕನ್ನಡ ಪರ ಚಿಂತಕರೂ ಆದ ವೈ.ಬಿ.ಎಚ್. ಜಯದೇವ್ ಅವರು ಮಾತನಾಡಿ,'ಪಳಗಿದ ಭಾಷೆ, ಹರಿತವಾದ ಸಂವೇದನೆಗಳ ಮೂಲಕ ' ಸಾಲುದೀಪಗಳು' ಕವನಸಂಕಲನವು ಒಂದು ದೊಡ್ಡ ಭಾವ ಜಗತ್ತನ್ನೇ ತೆರೆದಿಡುವ ಅಮೃತ ಕಳಶ ವಾಗಿದೆ'ಎಂದರು.

ಸಾಹಿತಿ ಲಲಿತಾ ಹೊಸಪ್ಯಾಟಿ ಮಾತನಾಡಿ" ಸಮುದ್ರದ ತಳದಲ್ಲಿ ಮುತ್ತು ರತ್ನಗಳಿರುವಂತೆ ಈ ಹನಿಗವನಗಳು ತಮ್ಮ ಪ್ರಜ್ವಲಿಸುವ ಪ್ರತಿಭೆಯಿಂದ ಕೋರೈಸುತ್ತವೆ'ಎಂದರು.

ಸಾಲುದೀಪಗಳು ಕೃತಿಯ ಕವಯಿತ್ರಿ ಬಿ. ಎಂ.ಪ್ರಮೀಳ ಮಹದೇವ್ ಮಾತನಾಡಿ" ತಾವು ಹುಟ್ಟಿ ಬೆಳೆದ ದಟ್ಟ ಮಲೆನಾಡಿನ ಆ ರಮ್ಯಪರಿಸರ ನಾನು ಕವಯತ್ರಿ ಆಗಲು ಸ್ಪೂರ್ತಿ - ಆಸಕ್ತಿ ಮೂಡಿಸಿದವು.

ಶಿಕ್ಷಕಿಯಾದ ನಾನು ನನಗೆ ಬದುಚಿಕು ಕಲ್ಪಿಸಿದ ಈ ಸಮಾಜಕ್ಕೆ ಪರಿಸರಕ್ಕೆನನ್ನ ಕವಿತೆಗಳ ಮೂಲಕ ದಿವ್ಯ ಸಂದೇಶಗಳನ್ನು ಕೊಡುವ ಆಕಾಂಕ್ಷೆ ನನ್ನದು . ನನಗೆ ಪ್ರೋತ್ಸಾಹ ಕೊಟ್ಟ ಎಲ್ಲರಿಗೂ ಹೃದಯಪೂರ್ವಕ ಧನ್ಯವಾದಗಳು'ಎಂದರು.

ಇದೆ ವೇಳೆ ಜಿಲ್ಲಾಮಟ್ಟದ ಕವಿಗೋಷ್ಠಿ ಮತ್ತು ಸಂಗೀತ ಗಾಯನ ಜರುಗಿತು.

ಸಮಾರಂಭದಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ ಕ.ಸಾ.ಪ ಅಧ್ಯಕ್ಷ ಕೋಡಿ ರಂಗಪ್ಪ, ತಾಲ್ಲೂಕಿನ ಕ.ಸಾ.ಪ ಅಧ್ಯಕ್ಷ ಯಲುವಹಳ್ಳಿ ಸೊಣ್ಣೇಗೌಡ, ಕೆ.ಟಿ. ಕೃಷ್ಣ ಕಾಂತ್, ಮಮತಾ ವಾರನಹಳ್ಳಿ, ಲಲಿತಾರಾಮುಮೂರ್ತಿ, ಪ್ರಾಂಶುಪಾಲ ಜಿ. ಚಂದ್ರಯ್ಯ ಮತ್ತು ಜಿಲ್ಲಾ ಕಸಾಪ ಎಲ್ಲಾ ತಾಲೂಕು ಘಟಕದ ಪದಾಧಿಕಾರಿಗಳು, ಸಾಹಿತ್ಯ ಆಸಕ್ತರು ಭಾಗವಹಿಸಿದ್ದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.